
# ವಿಜಯಪುರ ಸೈಕ್ಲಿಂಗ್ ಗ್ರೂಪ್ ನಿಂದ ಪಂಡರಪುರಕ್ಕೆ ಸೈಕಲ್ ಯಾತ್ರೆ ಇಂದು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಜಯಪುರ ಸೈಕ್ಲಿಂಗ್ ಗ್ರೂಪ್ ವತಿಯಿಂದ ಆಷಾಢ ಮಾಸದ ಅಂಗವಾಗಿ ಪಂಡರಪುರಕ್ಕೆ ಸೈಕಲ್ ಯಾತ್ರೆಯನ್ನು ಇಂದು ದಿ.11 ಶನಿವಾರ ಹಮ್ಮಿಕೊಳ್ಳಲಾಗಿದೆ ಎಂದು ವಿಸಿಜಿ ಸಂಘಟನಾ ಕಾರ್ಯದರ್ಶಿ ಸೋಮಶೇಖರ ಸ್ವಾಮಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ವಿಜಯಪುರದ ಬಿ.ಎಂ. ಪಾಟೀಲ ವೃತ್ತದಿಂದ ಶನಿವಾರ ಬೆ.5.30ಗಂ. ಆರಂಭವಾಗುವ ಸೈಕಲ್ ಯಾತ್ರೆಗೆ ವಿಧಾನ ಪರಿಷತ್ ಸದಸ್ಯ ಸುನೀಲಗೌಡ ಬಿ. ಪಾಟೀಲ ಚಾಲನೆ ನೀಡಲಿದ್ದಾರೆ. ವಿಸಿಜಿ ಅಧ್ಯಕ್ಷ ಡಾ. ಮಹಾಂತೇಶ ಬಿರಾದಾರ ಉಪಸ್ಥಿತ-ರಿರಲಿದ್ದಾರೆ. ಈ ಸೈಕಲ್ ಯಾತ್ರೆಯಲ್ಲಿ ಡಾ. ರವಿ ಚೌಧರಿ, ವಿಸಿಜಿ ಉಪಾಧ್ಯಕ್ಷ ಶಿವನಗೌಡ ಪಾಟೀಲ, ಸದಸ್ಯರಾದ ವೀರೇಂದ್ರ ಗುಚ್ಚಟ್ಟಿ, ಡಾ. ರಾಜು ಯಲಗೊಂಡ, ಅನೀಲ ಧಾರವಾಡಕರ, ಸಿದ್ದು ನಾಯ್ಕೋಡಿ, ಶ್ರೀಕಾಂತ ಅಂಗಡಿ ಸೇ-ರಿದಂತೆ ಒಟ್ಟು 40 ಸೈಕ್ಲಿಸ್ಟ್‌ಗಳು ತಮ್ಮ ಹೆಸರು ನೋಂದಾಯಿಸಿಕೊಂಡಿದ್ದಾರೆ. ಅಲ್ಲದೆ, ಕೊಟ್ಟಲಗಿ ಗ್ರಾಮದಲ್ಲಿ ಡಾ. ರವಿ ಸಂಖ ಅವರೊಂದಿಗೆ 5 ಜನರ ಸೈಕ್ಲಿಸ್ಟ್ ತಂಡ ಯಾತ್ರೆಯಲ್ಲಿ ಜೊತೆಯಾಗಲಿದ್ದಾರೆ. ಸುಮಾರು 100 ಕಿ.ಮೀ ದೂರದ ಈ ಪಂಡರಪುರ ಸೈಕಲ್ ಯಾತ್ರೆಯು ಅರಕೇರಿ, ಬಬಲಾದ, ಬಾಲಗಾಂವ, ಉಮದಿ, ಹುಲಜಂತಿ, ಮಂಗಳವೇಡಾ ಮಾರ್ಗವಾಗಿ ಸಂಜೆ ಪಂಡರಪುರಕ್ಕೆ ತಲುಪಲಿದೆ. ದಿ.12 ರವಿವಾರ ಬೆ.6 ಗಂ. ನಡೆಯಲಿರುವ ಅಖಿಲ ಮಹಾರಾಷ್ಟ್ರ ಪಂಡರಪುರ ಸೈಕಲ್ ವಾರಿ ಸಮ್ಮೇಳನದಲ್ಲಿ ವಿಸಿಜಿ ತಂಡ ಭಾಗವಹಿಸಲಿದೆ ಎಂದು ಸೋಮಶೇಖರ ಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ರಜಪೂತ ಸಮುದಾಯಗಳ ಅಭಿವೃದ್ಧಿ ನಿಗಮ ಸ್ಥಾಪಿಸಲು ಮನವಿ

■ ಉದಯರಶ್ಮಿ ದಿನಪತ್ರಿಕೆ

ತಾಳಿಕೋಟೆ: ಕರ್ನಾಟಕ ಸರ್ಕಾರವು ರಜಪೂತ ಸಮುದಾಯಗಳ ಆರ್ಥಿಕ ಮತ್ತು ಶೈಕ್ಷಣಿಕ ಅಭಿವೃದ್ಧಿಗಾಗಿ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಿ ಸಮಾಜ ಬಾಂದವ-ರಿಗೆ ಅನುಕೂಲ ಕಲ್ಪಿಸಿಕೊಡಬೇಕೆಂದು ತಾಳಿಕೋಟೆಯ ರಜಪೂತ ಸಮಾಜದ ಕ್ಷೇಮಾಭಿವೃದ್ಧಿ ಸಂಘ ರಾಜ್ಯ ಪಾಲರಿಗೆ ಹಾಗೂ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ಶುಕ್ರವಾರರಂದು ತಹಶಿಲ್ದಾರರ ಮುಖಾಂತರ ರವಾನಿಸಿದೆ.

ಕರ್ನಾಟಕ ರಜಪೂತ ಸಮೂದಾಯಗಳ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಿದಲ್ಲಿ ಆರ್ಥಿಕವಾಗಿ ಸಮುದಾಯದವರನ್ನು ಸ್ವಾವಲಂಬಿಗಳನ್ನಾಗಿಸಲು ಅನುಕೂಲವಾಗಲಿದೆ ಇದು ಅಲ್ಲದೇ ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕಾಗಿ ನೆರವಾಗುವ ನಿಟ್ಟಿನಲ್ಲಿ ಸಮೂದಾಯ ಉದ್ದೇಶವನ್ನು ಹೊಂದುವ ಕುರಿತು ಹಾಗೂ ಸಮಾಜದ ಸರ್ವತೋನ್ಮುಖ ಅಭಿವೃದ್ಧಿಗಾಗಿ ಶ್ರಮಿಸುವ ಕುರಿತು ನಿಗಮ ಸ್ಥಾಪನೆಯು ಅಗತ್ಯವಾಗಿದೆ ಎಂದು ರಜಪೂತ ಸಮಾಜದ ಕ್ಷೇಮಾಭಿವೃದ್ಧಿ ಸಂಘ ರಾಜ್ಯಪಾಲರಿಗೆ ಹಾಗೂ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರದಲ್ಲಿ ನಮೂದಿಸಿದೆ.

ಈ ವಿಷಯ ಕುರಿತು ರಜಪೂತ ಸಮಾಜ ಕ್ಷೇಮಾಭಿವೃದ್ಧಿ ಸಂಘ ಸಮಾಜಕ್ಕೆ ಅನುಕೂಲ ಕಲ್ಪಿಸಬೇಕೆಂದು ಒತ್ತಾಯಿಸುವ ಮೂಲಕ ರಜಪೂತ ಸಮಾಜದ ಮಹಾ ರಾಣಾಪ್ರತಾಪಸಿಂಹ ಸರ್ಕಲ್‌ದಿಂದ ಬಸ್ ನಿಲ್ದಾಣ ಮಾರ್ಗವಾಗಿ ತಾಲೂಕಾ ತಹಶಿಲ್ದಾರ ಕಚೇರಿಗೆ ತೆರಳಿ ಸಮಾಜದ ಎಲ್ಲ ಪದಾಧಿಕಾರಿಗಳು ಸದಸ್ಯರನ್ನೊಳಗೊಂಡು ಉಪಸ್ಥಿತ ಶಿರಸ್ಥದಾರರಿಗೆ ಮನವಿ ಸಲ್ಲಿಸಿ ಕೂಡಲೇ ಮನವಿಯನ್ನು ಗೌರವಾನ್ವಿತ ಸರ್ಕಾರಕ್ಕೆ ಸಲ್ಲಿಸಲಾಯಿತು.

ಈ ಸಮಯದಲ್ಲಿ ಮಾತನಾಡಿದ ರಜಪೂತ ಸಮಾಜದ ಯುವ ಮುಖಂಡ ವಿಜಯಸಿಂಗ್ ಹಜೇರಿ ಅವರು ಮಾತನಾಡಿ, ಈಗಾಗಲೇ ರಜಪೂತ ಸಮಾಜ ಕೌಟುಂಬಿಕ ಸಮೀಕ್ಷೆ ಹಾಗೂ ಡಿಜಿಟಲ್ ನೊಂದಣಿಯ ಪ್ರಕ್ರೀಯೇಯು ಅತ್ಯಂತ ಯಶಸ್ವಿಯಾಗಿ ನಡೆದಿದ್ದು ಸಮಗ್ರ ದತ್ತಾಂಶಗಳ ಡಾಟಾ ವರದಿಯು ಬೆಂಗಳೂ-ರಿನಲ್ಲಿರುವ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಆಯೋಗದ ಪರಿಶೀಲನೆಯಲ್ಲಿದೆ ಈ ಮಹತ್ವದ ಅಭಿಮಾನದ ಮೂಲಕ ಇಡೀ ರಾಜ್ಯದ ರಜಪೂತ ಸಮಾಜದ ಜನರು ಒಗ್ಗಟ್ಟಾಗುತ್ತಿದ್ದಾರೆ ಕಲ್ಬುರ್ಗಿ ಜಿಲ್ಲೆಯಲ್ಲಿ ಆರಂಭವಾಗಿರುವ ಈ ಪ್ರಕ್ರೀಯೆಗೆ ಪೂರಕವಾಗಿ ತಾಳಿಕೊಟೆ ತಾಲೂಕಿನ ರಜಪೂತ ಸಮಾಜ ಬಾಂದವರು ಧ್ವನಿಗುಡಿಸುತ್ತಿದ್ದೇವೆ ಕಾರಣ ನಮ್ಮ ಸಮಾಜದ ಸಮಗ್ರ ಅಭಿವೃದ್ಧಿಗಾಗಿ ರಜಪೂತ ಸಮಾಜದ ಅಭಿವೃದ್ಧಿ ನಿಗಮ ಮಂಡಳಿಯನ್ನು ತಕ್ಷಣವೇ ಸ್ಥಾಪಿಸಲು ಮಾನ್ಯ ಮುಖ್ಯಮಂತ್ರಿಗಳಿಗೆ ಹಾಗೂ ಹಿಂದೂಳಿದ ವರ್ಗದ ಕಲ್ಯಾಣ ಇಲಾಖೆಯ ಸಚೀವರಿಗೆ ಹಿಂದುಳಿದ ವರ್ಗದ ಆಯೋಗಕ್ಕೆ ಕೂಡಲೇ ತಾಲೂಕಾ ಆಡಳಿತದ ಪರವಾಗಿ ಈ ಶಿಪಾರಸ್ಸು ಪತ್ರವನ್ನು ಕೂಡಲೇ ಕಳುಹಿಸಿಕೊಡಬೇಕೆಂದು ರಾಜ್ಯಪಾಲರಿಗೆ ಹಾಗೂ ಮುಖ್ಯಮಂತ್ರಿಗಳಿಗೆ ಬರೆದಂತಹ ಮನವಿ ಪತ್ರವನ್ನು ಸಮಾಜದ ಎಲ್ಲರೂ ಒಗ್ಗೂಡಿ ಶಿರಸ್ಥದಾರರ ಮೂಲಕ ರವಾನಿಸಲಾಗಿದೆ ಎಂದರು.



ಮಹಾರಾಣಾ ಪ್ರತಾಪಸಿಂಹ ಸರ್ಕಲ್‌ದಿಂದ ಪ್ರತಿಭಟನೆ ನಡೆಸಿದ ಸಮಾಜ ಬಾಂದವರು ತಹಶಿಲ್ದಾರ ಕಚೇರಿಗೆ ಆಗಮಿಸಿ ತಹಶಿಲ್ದಾರ ಕಚೇರಿಯ ಶಿರಸ್ಥದಾರರಾದ ಎ.ಆರ್.ಚವ್ಹಾಣ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ರಜಪೂತ ಸಮಾಜದ ಅಧ್ಯಕ್ಷರಾದ ಹರಿಸಿಂಗ್ ಮೂಲಿಮನಿ, ಉಪಾಧ್ಯಕ್ಷ ರತನಸಿಂಗ್ ಕೊಕಟನೂರ, ಶಿರಸಕುಮಾರ ಹಜೇರಿ, ರಗುರಾಮಸಿಂಗ್ ಹಜೇ-ರಿ(ಶೇಠ), ನಾರಾಯಣಸಿಂಗ್ ಕೊಕಟನೂರ, ವಿಠ್ಠಲಸಿಂಗ್ ಬೇಕಿನಾಳ, ಗಂಗಾರಾಮಸಿಂಗ್ ಹಜೇರಿ, ಸುರೇಶ ಹಜೇರಿ, ವಿಠ್ಠಲ ಹಜೇರಿ, ದೀಲಿಪಸಿಂಗ್ ಹಜೇರಿ, ಅರುಣ ಧಡೇದ, ಮೋಹನಸಿಂಗ್ ರಜಪೂತ, ಗೋಪಾಲಸಿಂಗ್ ಹಜೇರಿ, ಮಾನಸಿಂಗ್ ಕೊಕಟನೂರ, ರಾಜು ವಿಜಾಪೂರ, ಕೇಸರಸಿಂಗ್ ಹಜೇರಿ, ಕೇಸರಸಿಂಗ್ ದೇವಿ, ಗೋವಿಂದಸಿಂಗ್ ಮೂಲಿಮನಿ, ಭರತ ವಿಜಾಪೂರ, ನೀತಿನ ವಿಜಾಪೂರ, ರಾಘು ಹಜೇರಿ, ರಾಘು ದೇವಿ, ಚಂದು ರಜಪೂತ, ಸಿತಾರಾಮಸಿಂಗ್ ವಿಜಾಪೂರ, ಜೈಸಿಂಗ್ ಮೂಲಿಮನಿ, ವಿಶ್ವ ಚವ್ಹಾಣ, ರಾಕೇಶ ಹಜೇರಿ, ರಾಹುಲ್ ಮೂಲಿಮನಿ, ಸುನೀಲ್ ಮೂಲಿಮನಿ, ಆನಂದಸಿಂಗ್ ಹಜೇರಿ, ಭವನಸಿಂಗ್ ಹಜೇರಿ, ಅಶೋಕಸಿಂಗ್ ಹಜೇರಿ, ಮೊದಲಾದವರು ಉಪಸ್ಥಿತರಿದ್ದರು.

# ವಿಜಯಪುರ ಜಿಲ್ಲೆ ಸಂಪೂರ್ಣ ಬರಪೀಡಿತ ಪ್ರದೇಶವೆಂದು ಘೋಷಿಸಿ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಮಳೆಯ ಕೊರತೆಯಿಂದ ರೈತರು ಬಿತ್ತನೆ ಮಾಡಲು ಹಿಂದೇಟು ಹಾಕುತ್ತಿರುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಮುಂಗಾರು ಮಳೆ ಕೈಕೊಡುವ ಲಕ್ಷಣಗಳು ಕಾಣಿಸುತ್ತಿವೆ. ಈ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಪ್ರದೇಶವೆಂದು ಘೋಷಿಸಬೇಕೆಂದು ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಸರ್ಕಾರವನ್ನು ಆಗ್ರಹಿಸಿದರು.

ಪಟ್ಟಣದಲ್ಲಿ ಬಸವನ ಬಾಗೇವಾಡಿ ಮಂಡಲ ಬಿಜೆಪಿ ಎಸ್‌ಸಿ ಮತ್ತು ಎಸ್‌ಟಿ ಕಾರ್ಯಕರ್ತರ ಸಭೆಯ ಬಳಿಕ, ತಹಶೀಲ್ದಾರ ಎಸ್.ಎಸ್. ಮ್ಯಾಗೇರಿ ಅವ-ರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ಉಪ ಮುಖ್ಯಮಂತ್ರಿ ಕಂದಾಯ ಸಚಿವ ಜಿ. ಪರಮೇಶ್ವರ ಅವರಿಗೆ ಬರೆದ ಮನವಿ ಪತ್ರವನ್ನು ಸಲ್ಲಿಸಿದರು.


ಮುಂಗಾರು ಹಂಗಾಮಿನಲ್ಲಿ ಬೆಳೆಯುವ ಗೋವಿನ ಜೋಳ, ಹೆಸರು, ಅಲಸಂದಿ, ಮುಕಣಿ ಸೇರಿದಂತೆ ವರ್ಷದ ಬೆಳೆಯಾದ ಕಬ್ಬು ಕೂಡ ಮಳೆಯಿಲ್ಲದೆ ಹಾಳಾಗುವ ಹಂತಕ್ಕೆ ತಲುಪಿದೆ. ಇದರಿಂದ ರೈತರಿಗೆ ಭಾರೀ ನಷ್ಟವಾಗುವ ಸಾಧ್ಯತೆ ಇದೆ ಎಂದು ಅವರು ತಿಳಿಸಿದರು. ರೈತರಿಗೆ ನೆರವಾಗಲು ರಾಷ್ಟ್ರೀಕೃತ ಹಾಗೂ ಸಹಕಾರಿ ಬ್ಯಾಂಕ್‌ಗಳಲ್ಲಿರುವ ಸಾಲವನ್ನು ಸಂಪೂರ್ಣ ಮನ್ನಾ ಮಾಡಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಮತ್ತು ಕಂದಾಯ ಸಚಿವರು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಇದೇ ವೇಳೆ ಜುಲೈ 14ರೊಳಗೆ ಆಲಮಟ್ಟಿ ಎಡದಂಡೆ, ಬಲದಂಡೆ ಹಾಗೂ ಮುಳವಾಡ ಏತ ನೀರಾವರಿ ಕಾಲುವೆಗಳ ಮೂಲಕ ಕೃಷ್ಣಾ ನದಿಯ ನೀರನ್ನು ಹ-ರಿಸಲು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ರೈತರೊಂದಿಗೆ ಸೇರಿ ಪಂಪ್‌ಹೌಸ್‌ನ ಮೋಟಾರ್‌ಗಳನ್ನು ಸ್ವತಃ ಚಾಲನೆ ಮಾಡಿ ಕಾಲುವೆಗಳಿಗೆ ನೀರು ಹರಿಸುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ವಿಠ್ಠಲ ಆಸಂಗಿ, ಅಖೀಲಗೌಡ ಪಾಟೀಲ, ಗುರು ಚಲವಾದಿ, ಶಿವಪುತ್ರ ಮೇತ್ರಿ, ಮಲ್ಲಿಕಾರ್ಜುನ ದೇವರಮನಿ, ಬಾಲು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಅನಧೀಕೃತ ಶಾಲೆಗಳಿಗೆ ಕಡಿವಾಣ : ಡಿಎಸ್ಸೆಸ್ ಸ್ವಾಗತ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಅನಧೀಕೃತ ಶಾಲೆಗಳ ಕಡಿವಾಣಕ್ಕೆ ಸಂಘಟನೆಯ ವತಿಯಿಂದ ನಡೆದ ಹೋರಾಟದ ಹಿನ್ನೆಲೆ ಪಟ್ಟಣದ ವಿದ್ಯಾನಗರದ ವಿದ್ಯಾಸ್ಫೂರ್ತಿ ಇಂಟ-ರ್ ನ್ಯಾಶನಲ್ ಪಬ್ಲಿಕ್ ಶಾಲೆಯ ಅನುಮತಿ ರದ್ದು ಪಡಿಸಿದ ಆದೇಶ ಸ್ವಾಗತಾರ್ಹ. ಶಿಕ್ಷಣ ಇಲಾಖೆಯ ದಿಟ್ಟ ಅಧಿಕಾರಿಗಳಿಗೆ ಮತ್ತು ಹೋರಾಟಕ್ಕೆ ಬೆಂಬಲಿಸಿದ ಬಡಾವಣೆಯ ನಿವಾಸಿಗಳಿಗೆ ನಮ್ಮ ಸಂಘಟನೆಯ ವತಿಯಿಂದ ಧನ್ಯವಾದಗಳನ್ನು ಅರ್ಪಿಸುತ್ತೇವೆ ಎಂದು ದಲಿತ ಸಂಘರ್ಷ ಸಮಿತಿಯ ಚಂದ್ರಕಾಂತ ಕಾದ್ರೊಳ್ಳಿ ಬಣದ ಜಿಲ್ಲಾಧ್ಯಕ್ಷ ಬಾಲಚಂದ್ರ ಹುಲ್ಲೂರ ಹೇಳಿದರು.

ಪಟ್ಟಣದ ತಹಸೀಲ್ದಾರ ಕಚೇ-ರಿಯ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿಕಾರಿಗಳ ಈ ಕಾರ್ಯ ಸಂತಸ ತಂದಿದ್ದರೂ ದೂರು ನೀಡಿದ ತಕ್ಷಣವೇ ಈ ಕಾರ್ಯವಾಗಿಲ್ಲವಲ್ಲ ಎಂಬ ನೋವು ಇದೆ. ದಾಖಲೆಗಳು ಖೊಟ್ಟಿ ಇವೆ ಅಂತಾ ತಿಳಿದರೂ ಅಧಿಕಾರಿಗಳು ವಿಳಂಬ ನೀತಿ ಅನುಸರಿಸಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ಹೋರಾಟದ ಬಗ್ಗೆ ಕೆಲವರು ನಮ್ಮ ಬಗ್ಗೆ ಅಪಪ್ರಚಾರ ಮಾಡಿದ್ದರು. ನಾವು ಹೋರಾಟ ಮಾಡುವವರು ಹೊರತು ಮಾರಾಟವಾಗುವವರಲ್ಲ. ಅಂಬೇಡ್ಕರ್ ಸಾಹೇಬರ ತತ್ವ ಸಿದ್ಧಾಂತಗಳನ್ನು ಪಾಲನೆ ಮಾಡುತ್ತೇವೆ ಹೊರತು ಕಂಡವರ ದುಡ್ಡಿಗೆ ಎಂದಿಗೂ ಆಸೆ ಪಡುವವರಲ್ಲ ಎಂದರು.

ಸಂಘಟನೆಯ ತಾಲೂಕು ಅಧ್ಯಕ್ಷ ರಮೇಶ ದೊಡಮನಿ, ರಾಜ್ಯ ಹೋರಾಟಗಾರ ದುರ್ಗಪ್ಪ ದೊಡಮನಿ, ಡಿಎಸ್‌ಎಸ್ ನ ಅಂಬೇಡ್ಕರ್ ಸೇನೆಯ ಜಿಲ್ಲಾ ಉಪಾಧ್ಯಕ್ಷ ಬಸವರಾಜ ಕಟ್ಟಿಮನಿ, ತಾಳಿಕೋಟೆ ತಾಲೂಕು ಅಧ್ಯಕ್ಷ ಗೋಪಾಲ ಕಟ್ಟಿಮನಿ ಮಾತನಾಡಿ, ಅಧಿಕಾರಿಗಳು ಸ್ವಯಂಪ್ರೇರಿತರಾಗಿ ಮಾಡಬೇಕಾದ ಕಾರ್ಯಕ್ಕೆ ಹೋರಾಟ ಮಾಡಬೇಕಾಯಿತು. ಇಂತಹ ಅಕ್ರಮ ಶಾಲೆಗಳು ಮತಕ್ಷೇತ್ರದಲ್ಲಿ ಸಾಕಷ್ಟಿವೆ. ಈ ಬಗ್ಗೆ ಅಧಿಕಾರಿಗಳಿಗೆ ಮಾಹಿತಿ ಇದ್ದರೂ ಕ್ರಮಕ್ಕೆ ಮುಂದಾಗದೇ ತಮ್ಮ ಅಧಿಕಾರವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಈಗಲಾದರೂ ಎಚ್ಚೆತ್ತುಕೊಂಡು ಶೀಘ್ರ ಕ್ರಮಕ್ಕೆ ಮುಂದಾಗಬೇಕು. ನಿರ್ಲಕ್ಷ ತೋರಿದಲ್ಲಿ ಬರುವ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವದು ಎಂದು ಎಚ್ಚ-ರಿಸಿದರು.

ಈ ವೇಳೆ ಸಂಘಟನೆಯ ಪದಾಧಿಕಾ-ರಿಗಳಾದ ಪರಶುರಾಮ ಕವಡಿಮಟ್ಟಿ, ರಮೇಶ ಹಡಗಿನಾಳ, ಆನಂದ ಚಲಮಿ, ಸಂಗಮೇಶ ಢವಳಗಿ, ಪರಶುರಾಮ ಚಲವಾದಿ ಇದ್ದರು.

# ಅತಿಯಾದ ಜನಸಂಖ್ಯೆ ಅಭಿವೃದ್ಧಿ ಮರೀಚಿಕೆ

■ ಉದಯರಶ್ಮಿ ದಿನಪತ್ರಿಕೆ

**ಇಂದು (ಜುಲೈ 11, ಶನಿವಾರ) "ವಿಶ್ವ ಜನಸಂಖ್ಯಾ ದಿನ" ಪ್ರಯುಕ್ತ ಈ ವಿಶೇಷ ಲೇಖನ**

ಪ್ರತಿ ವರ್ಷ ಜುಲೈ 11ರಂದು ವಿಶ್ವ ಜನಸಂಖ್ಯಾ ದಿನವನ್ನು ಆಚರಿಸಲಾಗುತ್ತದೆ. ಜನಸಂಖ್ಯೆಯ ಬೆಳವಣಿಗೆ, ಅದರ ಸವಾಲುಗಳು, ಸಂಪನ್ಮೂಲಗಳ ಸಮರ್ಪಕ ಬಳಕೆ ಹಾಗೂ ಸುಸ್ಥಿರ ಅಭಿವೃದ್ಧಿಯ ಕುರಿತು ಜನರಲ್ಲಿ ಅರಿವು ಮೂಡಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ.

ಜನಸಂಖ್ಯೆ ಒಂದು ದೇಶದ ಶಕ್ತಿಯೂ ಹೌದು, ಸವಾಲೂ ಹೌದು. ಅದು ಎಷ್ಟರ ಮಟ್ಟಿಗೆ ಅವಕಾಶವಾಗುತ್ತದೆ ಮತ್ತು ಎಷ್ಟರ ಮಟ್ಟಿಗೆ ಭಾರವಾಗುತ್ತದೆ ಎಂಬುದು ಆ ದೇಶದ ಯೋಜನೆ, ಶಿಕ್ಷಣ, ಆರೋಗ್ಯ, ಉದ್ಯೋಗ ಮತ್ತು ಸಂಪನ್ಮೂಲ ನಿರ್ವಹಣೆಯ ಮೇಲೆ ಅವಲಂಬಿತವಾಗಿದೆ.

**2026ರ ವಿಶ್ವ ಜನಸಂಖ್ಯಾ ದಿನದ ಧ್ಯೇಯವಾಕ್ಯ**


"ಇಂದಿನ ಮತ್ತು ಭವಿಷ್ಯದ ಯುವಜನರ ಭರವಸೆಗಳು ಮತ್ತು ಆಕಾಂಕ್ಷೆಗಳನ್ನು ಸಾಕಾರಗೊಳಿಸುವುದು"ಎಂದರೆ ಪ್ರಸ್ತುತ ಇರುವ ಮತ್ತು ಮುಂದಿನ ಪೀಳಿಗೆಯ ಯುವಕರ ಕನಸುಗಳು, ಗುರಿಗಳು ಮತ್ತು ಆಸೆಗಳನ್ನು ಈಡೇರಿಸುವುದು ಎಂದರ್ಥ.

ಒಂದು ಕಾಲದಲ್ಲಿ ಮನೆಯಲ್ಲಿ ಹೆಚ್ಚು ಜನಸಂಖ್ಯೆ ಇದ್ದರೆ ಹೆಚ್ಚು ಕೆಲಸದ ಕೈಗಳು" ಇವೆ ಎಂಬ ಮೂಢ ಅಭಿಪ್ರಾಯವಿತ್ತು. ಇಂದಿನ ಪರಿಸ್ಥಿತಿಯಲ್ಲಿ ಅನಿಯಂತ್ರಿತ ಜನಸಂಖ್ಯೆ ಹೆಚ್ಚಳವು ಅಭಿವೃದ್ಧಿಯ ಹಾದಿಯಲ್ಲಿ ದೊಡ್ಡ ಅಡೆತಡೆಯಾಗಿ ಪರಿಣಮಿಸಿದೆ. ಅಭಿವೃದ್ಧಿಯ ಕನಸುಗಳು ಕಾಣುತಿದ್ದೇವೆ ಆದರೆ ವಾಸ್ತವದಲ್ಲಿ ಅವು ಮರೀಚಿಕೆಯಂತೆ ದೂರ ಸರಿಯುತ್ತವೆ. ಆದ್ದರಿಂದಲೆ ಅತಿಯಾಗುತ್ತಿರುವ ಜನಸಂಖ್ಯೆಯಿಂದ ಅಭಿವೃದ್ಧಿ ಕುಂಠಿತವಾಗಿದೆ.

ಜನಸಂಖ್ಯೆ ಹೆಚ್ಚಾಗುತ್ತಿದ್ದಂತೆ ಆಹಾರ, ನೀರು, ವಸತಿ, ಶಿಕ್ಷಣ, ಆರೋಗ್ಯ, ಉದ್ಯೋಗ ಮತ್ತು ಸಾರಿಗೆ ಸೇರಿದಂತೆ ಪ್ರತಿಯೊಂದು ಮೂಲಭೂತ ಅಗತ್ಯದ ಮೇಲೂ ಒತ್ತಡ ಹೆಚ್ಚಾಗಿ ಕೊರತೆ ಉಂಟಾಗುತ್ತದೆ. ಸರ್ಕಾರಗಳು ಹೊಸ ಯೋಜನೆಗಳನ್ನು ರೂಪಿಸಿದರೂ,



ಹೆಚ್ಚುತ್ತಿರುವ ಜನಸಂಖ್ಯೆಯ ವೇಗಕ್ಕೆ ತಕ್ಕಂತೆ ಸೌಲಭ್ಯಗಳನ್ನು ಒದಗಿಸುವುದು ಕಷ್ಟಕರವಾಗುತ್ತದೆ. ಪರಿಣಾಮವಾಗಿ ಅಭಿವೃದ್ಧಿಯ ಲಾಭ ಎಲ್ಲರಿಗೂ ಸಮಾನವಾಗಿ ತಲುಪುವುದಿಲ್ಲ.



ನಗರಗಳಲ್ಲಿ ದಿನದಿಂದ ದಿನಕ್ಕೆ ಜನಸಂದಣಿ ಹೆಚ್ಚುತ್ತಿದೆ. ಗ್ರಾಮಗಳಿಂದ ಉದ್ಯೋಗ ಅರಸಿ ನಗರಗಳಿಗೆ ವಲಸೆ ಹೋಗುವವರ ಸಂಖ್ಯೆ ಏರುತ್ತಿದೆ. ಇದರ ಪರಿಣಾಮವಾಗಿ ಕೊಳಚೆ ಪ್ರದೇಶಗಳು ವಿಸ್ತರಿಸುತ್ತಿವೆ, ಸಂಚಾರ ದಟ್ಟಣೆ ಹೆಚ್ಚುತ್ತಿದೆ, ಮಾಲಿನ್ಯ ತೀವ್ರಗೊಳ್ಳುತ್ತಿದೆ ಮತ್ತು ಜೀವನದ ಗುಣಮಟ್ಟ ಕುಸಿಯುತ್ತಿದೆ. ಅಭಿವೃದ್ಧಿಯ ಹೆಸರಿನಲ್ಲಿ ಕಟ್ಟಡಗಳು ಏಳುತ್ತಿವೆ; ಆದ-'ರೆ ಮಾನವನ ನೆಮ್ಮದಿ ಮಾತ್ರ ಕುಸಿಯುತ್ತಿದೆ.ಶಿಕ್ಷಣ ಕ್ಷೇತ್ರವೂ ಜನಸಂಖ್ಯೆಯ ಒತ್ತಡವನ್ನು ಅನುಭವಿಸುತ್ತಿದೆ. ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುತ್ತಿದ್ದರೂ ಗುಣಮಟ್ಟದ ಶಿಕ್ಷಣ, ಸಮರ್ಪಕ ಶಿಕ್ಷಕರು ಹಾಗೂ ಮೂಲಸೌಕರ್ಯ ಎಲ್ಲೆಡೆ ಸಮರ್ಪಕವಾಗಿ ದೊರೆಯುತ್ತಿಲ್ಲ. ಶಿಕ್ಷಣದ ಉದ್ದೇಶ ಕೇವಲ ಪದವಿ ನೀಡುವುದಲ್ಲ ಉತ್ತಮ ನಾಗರಿಕರನ್ನು ರೂಪಿಸುವುದಾಗಿದೆ. ಆದರೆ ಅತಿಯಾದ ಒತ್ತಡದಿಂದ ಶಿಕ್ಷಣದ ಗುಣಮಟ್ಟಕ್ಕೆ ಧಕ್ಕೆಯಾಗುವ ಅಪಾಯ ಎದುರಾಗಿದೆ.

ಉದ್ಯೋಗದ ಕ್ಷೇತ್ರದಲ್ಲಿ ಪರಿಸ್ಥಿತಿ ಇನ್ನಷ್ಟು ಗಂಭೀರವಾಗಿದೆ. ಪ್ರತಿವರ್ಷ ಲಕ್ಷಾಂತರ ಯುವಕರು ವಿದ್ಯಾಭ್ಯಾಸ ಮುಗಿಸಿ ಉದ್ಯೋಗಕ್ಕಾಗಿ ಕಾಯುತ್ತಾರೆ. ಆದ-'ರೆ ಉದ್ಯೋಗಾವಕಾಶಗಳ ಪ್ರಮಾಣದಲ್ಲಿ ತೀರಾ ಕಡಿಮೆ. ಇದರ ಪರಿಣಾಮವಾಗಿ ನಿರುದ್ಯೋಗ, ಅರೆನಿರುದ್ಯೋಗ ಸಮಸ್ಯೆಗಳು ಹೆಚ್ಚಾಗುತ್ತಿವೆ ಕೆಲವರು ವಿದೇಶಗಳತ್ತ ಮುಖ ಮಾಡುತ್ತಾರೆ; ಇನ್ನೂ ಕೆಲವರು ತಮ್ಮ ಸಾಮರ್ಥ್ಯಕ್ಕೆ ತಕ್ಕ ಅವಕಾಶವಿಲ್ಲದೆ ಸಂಕಷ್ಟ ಅನುಭವಿಸುತ್ತಾರೆ. ಪರಿಸರದ ಮೇಲೂ ಜನಸಂಖ್ಯೆಯ ಒತ್ತಡ ಸ್ಪಷ್ಟವಾಗಿ ಗೋಚರಿಸುತ್ತದೆ. ಕಾಡುಗಳು ಕಡಿಮೆಯಾಗುತ್ತಿವೆ ಜಲಮೂಲಗಳು ಒಣಗುತ್ತಿವೆ, ಕೃಷಿಭೂಮಿಗಳು ವಸತಿ ಪ್ರದೇಶಗಳಾಗಿ ಮಾರ್ಪಡುತ್ತಿವೆ. ಭೂಮಿಯ ಸಂಪನ್ಮೂಲಗಳು ಸೀಮಿತವಾಗಿದ್ದರೂ, ಅವುಗಳ ಮೇಲಿನ ಬೇಡಿಕೆ ದಿನೇದಿನೇ ಹೆಚ್ಚುತ್ತಿದೆ. ಇದರಿಂದ ಭವಿಷ್ಯದ ಪೀಳಿಗೆಗೆ ಅಗತ್ಯವಾದ ನೈಸರ್ಗಿಕ ಸಂಪತ್ತು ಅಪಾಯಕ್ಕೆ ಸಿಲುಕುವ ಸಾಧ್ಯತೆ ಹೆಚ್ಚುತ್ತಿದೆ.

ಆರೋಗ್ಯ ಕ್ಷೇತ್ರದಲ್ಲಿಯೂ ಇದೇ ಸಮಸ್ಯೆ ಕಾಣಿಸುತ್ತದೆ. ಆಸ್ಪತ್ರೆಗಳಲ್ಲಿ ಜನದಟ್ಟಣೆ, ವೈದ್ಯರ ಕೊರತೆ, ಔಷಧಿಗಳ ಮೇಲಿನ ಹೆಚ್ಚಿದ ಬೇಡಿಕೆ ಮತ್ತು ಸಾರ್ವಜನಿಕ ಆರೋಗ್ಯ ವ್ಯವಸ್ಥೆಯ ಮೇಲಿನ ಒತ್ತಡ ಹೆಚ್ಚುತ್ತಿವೆ. ಉತ್ತಮ ಆರೋಗ್ಯ ಸೇವೆ ಎಲ್ಲರಿಗೂ ತಲುಪಬೇಕಾದರೆ ಜನಸಂಖ್ಯೆಯ ಬೆಳವಣಿಗೆ ಮತ್ತು ಆರೋಗ್ಯ ಮೂಲಸೌಕರ್ಯಗಳ ಅಭಿವೃದ್ಧಿ ಸಮತೋಲನದಲ್ಲಿರಬೇಕು.

ಆದಾಗ್ಯೂ ಜನಸಂಖ್ಯೆಯನ್ನೇ ಸಂಪೂರ್ಣ ಸಮಸ್ಯೆ ಎಂದು ನೋಡುವುದು ಸರಿಯಲ್ಲ. ಆರೋಗ್ಯವಂತ, ವಿದ್ಯಾವಂತ, ಕೌಶಲ್ಯಯುತ ಮತ್ತು ಉತ್ಪಾದಕ ಜನಸಂಖ್ಯೆ ಯಾವುದೇ ರಾಷ್ಟ್ರದ ದೊಡ್ಡ ಆಸ್ತಿಯಾಗಬಹುದು. ಆದ್ದರಿಂದ ಸಮಸ್ಯೆ ಜನಸಂಖ್ಯೆಯ ಅಸ್ತಿತ್ವದಲ್ಲಲ್ಲ; ಅದರ ಅನಿಯಂತ್ರಿತ ಬೆಳವಣಿಗೆಯಲ್ಲಿ ಮತ್ತು ಸಮರ್ಪಕ ಯೋಜನೆಯ ಕೊರತೆಯಲ್ಲಿದೆ. ಈ ಸವಾಲನ್ನು ಎದುರಿಸಲು ಜನರಲ್ಲಿ ಜಾಗೃತಿ ಅತ್ಯಗತ್ಯ. ಕುಟುಂಬ ಯೋಜನೆ, ಮಹಿಳಾ



ಶಿಕ್ಷಣ, ಹೆಣ್ಣುಮಕ್ಕಳ ಸಬಲೀಕರಣ, ತಾಯಿ-ಮಗು ಆರೋಗ್ಯ, ಸಮಾನ ಅವಕಾಶಗಳು ಮತ್ತು ಜವಾಬ್ದಾರಿಯುತ ಪೋಷಕತ್ವಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ಶಿಕ್ಷಣ ಪಡೆದ ಮಹಿಳೆಯರು ಮತ್ತು ಆರೋಗ್ಯಕರ ಕುಟುಂಬ ವ್ಯವಸ್ಥೆ ಸಮಾಜದ ಅಭಿವೃದ್ಧಿಗೆ ಬಲವಾದ ಅಡಿಪಾಯವಾಗುತ್ತವೆ.

ಸರ್ಕಾರಗಳು ಜನಸಂಖ್ಯೆ ನಿಯಂತ್ರಣದ ಜೊತೆಗೆ ಗುಣಮಟ್ಟದ ಶಿಕ್ಷಣ, ಉದ್ಯೋಗ ಸೃಷ್ಟಿ, ಗ್ರಾಮೀಣ ಅಭಿವೃದ್ಧಿ, ಸುಸ್ಥಿರ ಕೃಷಿ, ಪರಿಸರ ಸಂರಕ್ಷಣೆ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ದೀರ್ಘಕಾಲೀನ ಯೋಜನೆಗಳನ್ನು ರೂಪಿಸಬೇಕು. ಕೇವಲ ಅಂಕಿಅಂಶಗಳ ಅಭಿವೃದ್ಧಿಯಲ್ಲ, ಪ್ರತಿಯೊಬ್ಬ ನಾಗರಿಕನ ಜೀವನಮಟ್ಟ ಸುಧಾರಿಸುವ ಅಭಿವೃದ್ಧಿಯೇ ನಿಜವಾದ ಪ್ರಗತಿ.

ವಿಶ್ವ ಜನಸಂಖ್ಯಾ ದಿನವು ಕೇವಲ ಆಚರಣೆಯ ದಿನವಲ್ಲ ಅದು ಆತ್ಮಾವಲೋಕನದ ದಿನ. ನಾವು ನಮ್ಮ ಕುಟುಂಬ, ಸಮಾಜ ಮತ್ತು ದೇಶದ ಭವಿಷ್ಯದ ಬಗ್ಗೆ ಯೋಚಿಸಬೇಕಾದ ದಿನ. ಅಭಿವೃದ್ಧಿ ಎನ್ನುವುದು ಎತ್ತರದ ಕಟ್ಟಡಗಳು, ಅಗಲವಾದ ರಸ್ತೆಗಳು ಅಥವಾ ದೊಡ್ಡ ಕೈಗಾರಿಕೆಗಳಿಂದ ಮಾತ್ರ ಅಳೆಯಲಾಗುವುದಿಲ್ಲ. ಪ್ರತಿಯೊಬ್ಬ ಮನುಷ್ಯನಿಗೂ ಶಿಕ್ಷಣ, ಆರೋಗ್ಯ, ಉದ್ಯೋಗ, ಸುರಕ್ಷಿತ ಪರಿಸರ ಮತ್ತು ಘನತೆಯ ಜೀವನ ದೊರೆತಾಗ ಮಾತ್ರ ಅದನ್ನು ನಿಜವಾದ ಅಭಿವೃದ್ಧಿ ಎನ್ನಬಹುದು. ಜನಸಂಖ್ಯೆ ಹೆಚ್ಚಿದಷ್ಟೇ ದೇಶ ಅಭಿವೃದ್ಧಿಯಾಗುವುದಿಲ್ಲ. ಮಾನವ ಸಂಪನ್ಮೂಲದ ಗುಣಮಟ್ಟ ಹೆಚ್ಚಿದಾಗ ಮಾತ್ರ ರಾಷ್ಟ್ರ ಸಮೃದ್ಧಿಯಾಗುತ್ತದೆ. ಇಲ್ಲವಾದರೆ ಅಭಿವೃದ್ಧಿಯ ಕನಸು ಮರಳುಗಾಡಿನ ಮರೀಚಿಕೆಯಂತೆ ಕಾಣುತ್ತಲೇ ಇರುತ್ತದೆ ಹತ್ತಿರ ಹೋದಂತೆ ಮತ್ತಷ್ಟು ದೂರ ಸರಿಯುತ್ತದೆ. ದೇಶದ ಜನಸಂಖ್ಯೆ ಹೆಚ್ಚುತ್ತಾ ಹೋಗಿ ಸಮಸ್ಯೆಗಳನ್ನು ಹುಟ್ಟು ಹಾಕುತ್ತದೆ. ಆಗ ಅಭಿವೃದ್ಧಿ ಕನಸಾಗಿಯೇ ಉಳಿಯುತ್ತದೆ.

ಲೇಖನ
– ಅವಿನಾಶ ಸೆರೆಮನಿ
ಬೈಲಹೊಂಗಲ
ಬೆಳಗಾವಿ ಜಿಲ್ಲೆ



# ಜನಸಂಖ್ಯೆ ನಿಯಂತ್ರಿಸಿ ಆರ್ಥಿಕ ಪ್ರಗತಿ ಸಾಧಿಸಿ




## ಇಂದು (ಜುಲೈ 11 ಶನಿವಾರ "ವಿಶ್ವ ಜನಸಂಖ್ಯಾ ದಿನ" ಪ್ರಯುಕ್ತ ಈ ವಿಶೇಷ ಲೇಖನ

■ ಉದಯರಶ್ಮಿ ದಿನಪತ್ರಿಕೆ

ಆರ್ಥಿಕ ತಜ್ಞ ಜಾಕ್ವೆಸ್ ಕೂಸ್ಟೋ ಅವರು "ಮಿತಿಮೀರಿದ ಬೆಳೆಯುವ ಜನಸಂಖ್ಯೆಯಿಂದ ಇಂದು ನಾವು ಎದುರಿಸುತ್ತಿರುವ ಪ್ರತಿಯೊಂದು ಪರಿಸರ ಸಮಸ್ಯೆಗೆ ಮೂಲ ಕಾರಣವಾಗಿದೆ". ಎಂದು ಹೇಳಿದ್ದಾರೆ. ಹೆಚ್ಚುತ್ತಿರುವ ಜನಸಂಖ್ಯೆಯಿಂದಾಗುವ ಸಮಸ್ಯೆಗಳಾದ ಬಡತನ, ನಿರುದ್ಯೋಗ ಮತ್ತು ಸಂಪನ್ಮೂಲಗಳ ಕೊರತೆಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಇಂದಿನ ಅಗತ್ಯತೆಯಾಗಿದೆ.

ಜಗತ್ತಿನಾದ್ಯಂತ ಜನಸಂಖ್ಯೆ ನಿಯಂತ್ರಣದ ಜಾಗೃತಿ, ಅರಿವು ಮೂಡಿಸುವುದು ಹಾಗೂ ಸಾರ್ವಜನಿಕರಲ್ಲಿ ಜನಸಂಖ್ಯಾ ಸ್ಫೋಟ ಮತ್ತು ಅದರಿಂದುಂಟಾಗುವ ಸಮಸ್ಯೆಗಳ ಬಗ್ಗೆ ಗಮನ ಹರಿಸುವಂತೆ ಮಾಡುವುದೇ ಈ ವಿಶ್ವ ಜನಸಂಖ್ಯಾ ದಿನಾಚರಣೆಯ ಪ್ರಮುಖ ಉದ್ದೇಶವಾಗಿದೆ. ಈ ದಿನಾಚರಣೆಯನ್ನು ಪ್ರತಿವರ್ಷ ಜುಲೈ 11 ರಂದು ವಿಶ್ವದಾದ್ಯಂತ ಆಚರಿಸಲಾಗುತ್ತಿದೆ.

ಮೊಟ್ಟಮೊದಲು ಈ ದಿನಾಚರಣೆಯನ್ನು 1989 ರಲ್ಲಿ ಸಂಯುಕ್ತ ರಾಷ್ಟ್ರಗಳ ಅಭಿವೃದ್ಧಿ ಕಾರ್ಯಕ್ರಮ ಆಡಳಿತ ಮಂಡಳಿಯ ವತಿಯಿಂದ ಆಚರಿಸಲಾಯಿತು.

### ಜಾಗೃತಿ ಆಂದೋಲನವಾಗಬೇಕು

ವಿಶ್ವ ಜನಸಂಖ್ಯಾ ದಿನಾಚರಣೆಯು ಒಂದು ಜಾಗತಿಕ ಮಟ್ಟದಲ್ಲಿ ಜಾಗೃತಿ ಮೂಡಿಸುವ ಆಂದೋಲನವಾಗಿದ್ದು, ಈ ದಿನದ ಆಚರಣೆಯ ಮೂಲಕ ವರ್ಷದಿಂದ ವರ್ಷಕ್ಕೆ ತೀವ್ರಗತಿಯಲ್ಲಿ ಬೆಳೆಯುತ್ತಿರುವ ಮತ್ತು ಗಂಭೀರ ಸ್ವರೂಪವನ್ನು ಪಡೆಯುತ್ತಿರುವ ಜನಸಂಖ್ಯಾ ಸ್ಫೋಟಕ್ಕೆ ಕಾರಣಗಳು, ಅದರ ನಿಯಂತ್ರಣ ಮತ್ತು ಅದರಿಂದ ಮನುಕುಲದ ಮೇಲೆ ಉಂಟಾಗುವ ದುಷ್ಪರಿಣಾಮಗಳನ್ನು ಹಾಗೂ ಸಮಸ್ಯೆಗಳಿಗೆ ಸೂಕ್ತ ಪರಿಹಾರಗಳನ್ನು ಕಂಡುಕೊಂಡು ಜನರಲ್ಲಿ ಒಂದೇ ವೇದಿಕೆಯಲ್ಲಿ ಕರೆತರುವ ಹಾಗೂ ಜಾಗೃತಿ ಮೂಡಿಸುವ ಈ ದಿನದ ಪ್ರಮುಖ ಧ್ಯೇಯವಾಗಿದೆ.

### ರಾಷ್ಟ್ರದ ಆರ್ಥಿಕ ಪ್ರಗತಿಗೆ ಜನಸಂಖ್ಯೆ ನಿಯಂತ್ರಣ ಅಗತ್ಯ

ಭಾರತದಂತಹ ಮಿಶ್ರ ಆರ್ಥಿಕ ವ್ಯವಸ್ಥೆ ಹೊಂದಿದ ರಾಷ್ಟ್ರಕ್ಕೆ



ಜನಸಂಖ್ಯೆಯುಪ್ರಮುಖಸಮಸ್ಯೆಯಾಗಿದೆ.ದೇಶದಲ್ಲಿನಜನಸಂಖ್ಯೆಯ ಸಮಸ್ಯೆಯನ್ನು ಕಿತ್ತೊಗೆಯಲು ಹಲವು ಪ್ರಯತ್ನಗಳು ನಡೆಯುತ್ತಿವೆ. ಆದ್ದರಿಂದ ಜನಸಂಖ್ಯೆಯ ಹೆಚ್ಚಳದ ಮೇಲೆ ನಿಯಂತ್ರಣವನ್ನು



ಹೊಂದುತ್ತಾ ಹಾಗೂ ಅಭಿವೃದ್ಧಿ ಹೊಂದಿದ ರಾಷ್ಟ್ರಗಳ ನಡುವೆ ಆರ್ಥಿಕ ಪ್ರಗತಿಯನ್ನು ಸಾಧಿಸುವಲ್ಲಿ ಸಮತೋಲನ ಕಾಯ್ದುಕೊಳ್ಳಬೇಕಾಗಿದೆ. ತೀವ್ರಗತಿಯಲ್ಲಿ ಬೆಳೆಯುತ್ತಿರುವ ಜನಸಂಖ್ಯೆಯಿಂದ ದೇಶದಲ್ಲಿ ಅಜ್ಞಾನ, ಅನಕ್ಷರತೆ, ಬಡತನ, ನಿರುದ್ಯೋಗ, ಅನಾರೋಗ್ಯ ಜೀವನ ಹಾಗೂ ಆಹಾರ ಸಮಸ್ಯೆಯಂತಹ ಅನೇಕ ಸಮಸ್ಯೆಗಳು ದೇಶವನ್ನು ಬೆಂಬಿಡದೇ ಕಾಡುತ್ತಿವೆ. ಈ ದಿನಾಚರಣೆಯ ಮೂಲಕ ಜನರಲ್ಲಿ ಜನಸಂಖ್ಯಾ ನಿಯಂತ್ರಣದ ಕುರಿತು ಗಂಭೀರವಾಗಿ ಚರ್ಚೆ, ಆಲೋಚನೆ, ಕಠಿಣ ನಿರ್ಧಾರ, ಚಿಕ್ಕ ಕುಟುಂಬ ಮತ್ತು ಕುಟುಂಬ ಕಲ್ಯಾಣ ಯೋಜನೆಯ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಕಾರ್ಯರೂಪದಲ್ಲಿ ತರಬೇಕಾಗಿರುವದು ಇಂದಿನ ಅಗತ್ಯವಾಗಿದೆ.

### ಮಿತ ಸಂತಾನ ಸುಖೀ ಜೀವನವೆಂಬ ಮಂತ್ರ ಜಪಿಸಿ

"ನಾವಿಬ್ಬರೂ ನಮಗಿಬ್ಬರು" ಹಾಗೂ "ಆರತಿಗೊಬ್ಬ ಮಗಳು ಕೀರ್ತಿಗೊಬ್ಬ ಮಗ" ಎಂಬ ಘೋಷಣೆಯಡಿಯಲ್ಲಿ ಅನೇಕ ಮಹತ್ತರವಾದ ಹಾಗೂ ಪ್ರೋತ್ಸಾಹದಾಯಕವಾದ ಯೋಜನೆಗಳನ್ನು ಕುಟುಂಬ ಕಲ್ಯಾಣ ಇಲಾಖೆಯು ರೂಪಿಸಿ ತನ್ಮೂಲಕ ಜನಸಂಖ್ಯೆ ಏರಿಕೆಯನ್ನು ತಡೆಗಟ್ಟುವದು ಹಾಗೂ ನಿಯಂತ್ರಣ ಸಾಧಿಸವುದು ಇಂದಿನ ಅವಶ್ಯಕತೆಯಾಗಿದೆ. ಚಿಕ್ಕ, ಸ್ವಾಸ್ಥ್ಯ, ಆರೋಗ್ಯಯುತ ಹಾಗೂ ಸುಸ್ಥಿರ ಸಮಾಜದ ನಿರ್ಮಾಣಕ್ಕಾಗಿ ಹಾಗೂ ದೇಶದ ಆರ್ಥಿಕಾಭಿವೃದ್ಧಿಗೆ ಪೂರಕವಾಗುವಂತೆ ಜನಸಂಖ್ಯೆ ನಿಯಂತ್ರಣದ ದೃಢವಾದ ಹೆಜ್ಜೆಯನ್ನಿಡಬೇಕಾಗಿದೆ. 2011 ರಲ್ಲಿ ಪ್ರಪಂಚದ ಒಟ್ಟು ಜನಸಂಖ್ಯೆಯು ಅಂದಾಜು 700 ಕೋಟಿಗಳಷ್ಟು ತಲುಪಿದಾಗ ಜಾಗತಿಕ ಮಟ್ಟದಲ್ಲಿ ರಾಷ್ಟ್ರಗಳ ಅಭಿವೃದ್ಧಿ ಮತ್ತು ಪ್ರಗತಿಯೆಂಬುದು ಒಂದು ದೊಡ್ಡ ಸವಾಲಾಗಿ ಪರಿಣಮಿಸಿತ್ತು. ಹೀಗೆ ದೇಶದ ಪ್ರಗತಿಗೆ ಮಾರಕವಾಗುತ್ತಿರುವ ಜನಸಂಖ್ಯಾ ಸ್ಫೋಟದ ಪರಿಣಾಮಗಳನ್ನು ಮನಗಂಡು, ಗುರುತಿಸಿ ಅದಕ್ಕೆ ನೈಜ ಪರಿಹಾರ ಕಂಡಕೊಳ್ಳಲು ಹಾಗೂ ಜನಸಂಖ್ಯೆ ಹೆಚ್ಚಳದ ಬಗ್ಗೆ ಸಾರ್ವಜನಿಕರ ಗಮನ ಸೆಳೆಯಲು ಈ ದಿನಾಚರಣೆಯನ್ನು ಪ್ರಾರಂಭಿಸಲಾಯಿತು.

ಜನಸಂಖ್ಯಾ ಸ್ಫೋಟದಿಂದ ಆರ್ಥಿಕತೆ ಕುಂಠಿತ: 1951 ರಲ್ಲಿ ಕೇವಲ 36 ಕೋಟಿಗಳಷ್ಟಿದ್ದ ಭಾರತದ ಜನಸಂಖ್ಯೆಯು 1981 ರ ಹೊತ್ತಿಗೆ ಅದು 70 ಕೋಟಿಗೆ ತಲುಪಿತು. ಜೂನ್ 2026ರ ಅಂತ್ಯದ ವೇಳಗೆ ಭಾರತದ ಜನಸಂಖ್ಯೆ ಅಂದಾಜು 147. 65 ಕೋಟಿ ಮೀರಿದೆ. ಅದೇ ರೀತಿ ವಿಶ್ವದ ಜನಸಂಖ್ಯೆಯು 2016 ರಲ್ಲಿ 740 ಕೋಟಿಯಷ್ಟು ಇದ್ದದ್ದು, ಏಪ್ರಿಲ್ 2017 ರ ವೇಳೆಗೆ ಅದು 750 ಕೋಟಿಯಷ್ಟಿತ್ತು. ಪ್ರಸ್ತುತ 830 ಕೋಟಿಗೂ ಮೀರಿದ ಬೆಳೆಸಯುತ್ತಿರುವದು ನಿಜಕ್ಕೂ ಕಳವಳಕಾರಿ ಸಂಗತಿ. ಜನನ ಪ್ರಮಾಣದಲ್ಲಿ ಏರಿಕೆ ಹಾಗೂ ಆಧುನಿಕ ಆರೋಗ್ಯ ಮತ್ತು ವೈದ್ಯಕೀಯ ಕ್ಷೇತ್ರದಲ್ಲಾಗುತ್ತಿರುವ ಅಮೂಲಾಗ್ರ ಸುಧಾರಣೆಗಳು ಹಾಗೂ ಸೌಲಭ್ಯಗಳಿಂದ ಮರಣ ಪ್ರಮಾಣವು ಗಣನೀಯವಾಗಿ ಇಳಿಕೆಯಾಗುತ್ರಿರುವ ಜನಸಂಖ್ಯಾ ಸ್ಫೋಟಕ್ಕೆ ಮುಖ್ಯ ಕಾರಣವೆನ್ನಬಹುದು. ಅಷ್ಟೇ ಅಲ್ಲದೆ ಜನಸಂಖ್ಯೆ ಹೆಚ್ಚಳವಾದಷ್ಟು ಸಮಸ್ಯೆಯು ಹೆಚ್ಚಾಗುತ್ತಲೇ ಹೋಗುತ್ತಿವೆ. ಹಿಂದಿನ ಕಾಲದಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಸಂಪನ್ಮೂಲವಿತ್ತು. ಇಂದಿನ ದಿನಗಳಲ್ಲಿ ಹೆಚ್ಚುತ್ತಿರುವ ಜನಸಂಖ್ಯೆಗೆ ಅಗತ್ಯ ಸಂಪನ್ಮೂಲದ ಕೊರತೆ ಉಂಟಾಗುತ್ತಿರುವದರಿಂದ ದೇಶದ ಆರ್ಥಿಕ ಪ್ರಗತಿ ಕುಂಠಿತಗೊಳ್ಳಲು ಕಾರಣೀಭೂತವಾಗಿದೆ. ಇದರಿಂದ ದೇಶದಲ್ಲಿ ಬಡತನ, ನಿರುದ್ಯೋಗದಂತಹ ಸಮಸ್ಯೆಗಳು ಉಲ್ಬಣಗೊಳ್ಳುತ್ತಿವೆ.

### 2026 ನೇಯ ವರ್ಷದ ಘೋಷವಾಕ್ಯ

ಈ ವರ್ಷದ ವಿಶ್ವ ಜನಸಂಖ್ಯಾ ದಿನವು "ಯುವಜನರ ಭರವಸೆಗಳು ಮತ್ತು ಆಕಾಂಕ್ಷೆಗಳನ್ನು ನನಸು ಮಾಡುವುದು; ಇಂದು ಮತ್ತು ಭವಿಷ್ಯಕ್ಕಾಗಿ" ಎಂಬ ಧ್ಯೇಯವಾಕ್ಯದೊಂದಿಗೆ ನಾಳಿನ ಭವಿಷ್ಯದಲ್ಲಿ ಯುವಜನತೆಯ ಆಶೋತ್ತರಗಳನ್ನು ಈಡೇರಿಸಬೇಕಾದರೆ ಇಂದೇ ನಾವು ಜನಸಂಖ್ಯೆಯನ್ನು ನಿಯಂತ್ರಿಸಿಕೊಂಡು, ರಾಷ್ಟ್ರದ ಆರ್ಥಿಕಾಭಿವೃದ್ಧಿಗೆ ನಾಂದಿ ಹಾಡಬೇಕು ಎನ್ನುವ ಸಂದೇಶವಿದೆ. ಭವಿಷ್ಯದಲ್ಲಿ ಯುವಕರ ಸಬಲೀಕರಣದ ಜತೆಗೆ ರಾಷ್ಟ್ರವನ್ನು ಆರ್ಥಿಕತೆಯಲ್ಲಿ ಸಂಪನ್ಮೂಲ, ಸುಸ್ಥಿರ ಮತ್ತು ಪ್ರಗತಿಗೆ ಬುನಾದಿಯಾಗಬೇಕು.

### ಉಪಸಂಹಾರ

"ಹುಟ್ಟಿದ ದೇವರು ಹುಲ್ಲು ಮೇಯಿಸುತ್ತಾನೆಯೇ" ಎಂಬಂತಹ ಮೌಢ್ಯತೆಯನ್ನು ಹೋಗಲಾಡಿಸಬೇಕು. ಆದ್ದರಿಂದ ಜನಸಂಖ್ಯೆಯಲ್ಲಿ ಏರಿಕೆಯಲ್ಲಿ ಸ್ಥಿರತೆಯನ್ನು ಕಾಯ್ದುಕೊಂಡು ರಾಷ್ಟ್ರದ ಅಭಿವೃದ್ಧಿಗೆ ಕಾರ್ಯಕ್ರಮಗಳು ಪರಿಣಾಮಕಾರಿ ಹಾಗೂ ಯಶಸ್ವಿಯಾಗಬೇಕಾದರೆ ಹಾಗೂ ಭಾರತವು ಸಂಪದ್ಭರಿತವಾಗಲು ಜನಸಂಖ್ಯೆ ನಿಯಂತ್ರಣ ಅತಿ ಅವಶ್ಯಕವಾಗಿದೆ. ಜನರಲ್ಲಿರುವ ಆದರೆ ಈ ವಿಶ್ವ ಜನಸಂಖ್ಯಾ ದಿನಾಚರಣೆಯ ಹೆಸರಿನಲ್ಲಿ ಜನಸಂಖ್ಯಾ ಸ್ಫೋಟದ ಸಮಸ್ಯೆಗಳನ್ನು ತಡೆಯುವ ಸಲುವಾಗಿ ಸಮಾಜ, ಸಮುದಾಯ ಮತ್ತು ಜನರೊಂದಿಗೆ ಕೈ ಜೋಡಿಸುವ ನಿಟ್ಟಿನಲ್ಲಿ ಕೂಡಿ ಕೆಲಸ ಮಾಡಲು ವಿವಿಧ ಆರೋಗ್ಯ ಸಂಸ್ಥೆಗಳು, ಶೈಕ್ಷಣಿಕ ಸ್ಪರ್ಧೆಗಳಾದ ಚರ್ಚಾಕೂಟ, ಚಿತ್ರಕಲೆ ಆಯೋಜಿಸುವದು ಹಾಗೂ ರೇಡಿಯೋ, ದೂರದರ್ಶನಗಳಲ್ಲಿ ಪ್ರಸಾರ ಸಂವಾದ ಹಾಗೂ ಜನಸಂಖ್ಯಾ ಸಂಬಂಧಿತ ಕಾರ್ಯಕ್ರಮಗಳನ್ನು ಪ್ರಸಾರ ಮಾಡುವದು ಅವಶ್ಯಕ. ಈ ದೇಶದ ಪ್ರಜೆಗಳಾದ ನಾವು-ನಿವೆಲ್ಲರೂ "ಮಿತ ಸಂತಾನ ಹಿತ ಸಂತಾನ" ಎಂಬುದನ್ನು ಅರಿತು ಜನಸಂಖ್ಯೆ ನಿಯಂತ್ರಿಸುವಲ್ಲಿ ಕ್ರಮ ವಹಿಸಬೇಕಾಗಿದೆ ಮತ್ತು ಜವಾಬ್ದಾರಿಯನ್ನು ಹೊಂದಬೇಕಾಗಿದೆ. ಈ ಕಾರ್ಯವು ಕೇವಲ ಸರಕಾರದ ಯೋಜನೆ, ಕಾರ್ಯಕ್ರಮ ಅಥವಾ ಆಂದೋಲನವಾಗಬಾರದು. ದೇಶದ ಜವಾಬ್ದಾರಿಯುತ ಪ್ರಜೆಗಳಾದ ನಾವೆಲ್ಲರೂ ನಮ್ಮ ಜವಾಬ್ದಾರಿಗಳನ್ನು ಅರಿತುಕೊಂಡು ಜನಸಂಖ್ಯಾ ನಿಯಂತ್ರಣದಲ್ಲಿ ಸರಕಾರ, ಸಂಘ-ಸಂಸ್ಥೆ ಹಾಗೂ ಸರಕಾರೇತರ ಸಂಸ್ಥೆಗಳೊಂದಿಗೆ ಕೈ ಜೋಡಿಸಿದಾಗ ಮಾತ್ರ ವಿಶ್ವ ಜನಸಂಖ್ಯಾ ದಿನಾಚರಣೆಯು ಒಂದು ಅರ್ಥಪೂರ್ಣವಾಗಲು ಸಾಧ್ಯ. ಶಾಲೆ-ಕಾಲೇಜುಗಳಲ್ಲಿ ಈ ದಿನವನ್ನು ಅರ್ಥಪೂರ್ಣವಾಗಿ ಆಚರಿಸುತ್ತಾ, ವಿದ್ಯಾರ್ಥಿಗಳಿಗೆ ಜನಸಂಖ್ಯಾ ನಿಯಂತ್ರಣವಿಲ್ಲದೇ ಹೋದರೆ ಏನೆಲ್ಲ ಸಮಸ್ಯೆಗಳು ಉಂಟಾಗುತ್ತವೆ ಎನ್ನುವುದನ್ನು ಮನವರಿಕೆ ಮಾಡಿಕೊಡಬೇಕು.

ಲೇಖನ
ಮಲ್ಲಪ್ಪ. ಸಿ.
ಖೊದ್ನಾಪೂರ
(ತಿಕೋಟಾ)
ವಿಜಯಪುರ



# ನಿಖರ ಬೆಳೆ ಹಾನಿ ಸಮೀಕ್ಷೆಗೆ ಸೂಚನೆ

ಗದಗ: ಜಿಲ್ಲೆಯಲ್ಲಿ ಉಂಟಾಗಿರುವ ಮಳೆ ಅಭಾವ ಹಾಗೂ ಕೃಷಿ ಬೆಳೆಗಳ ಪ್ರಸ್ತುತ ಸ್ಥಿತಿಗತಿ ಕುರಿತು ನಿಖರ ಬೆಳೆ ಹಾನಿ ಸಮೀಕ್ಷೆ ನಡೆಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಳೆ ಕೊರತೆಯಿಂದ ಒಣಗುತ್ತಿರುವ ಬೆಳೆಗಳು, ಪರ್ಯಾಯ ಬೆಳೆ ಯೋಜನೆ ಹಾಗೂ ರೈತರಿಗೆ ನೀಡಬೇಕಾದ ಮಾರ್ಗಸೂಚಿಗಳ ಕುರಿತು ಸುದೀರ್ಘವಾಗಿ ಜಿಲ್ಲಾಧಿಕಾರಿಗಳು ವಿವಿಧ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.

ಜುಲೈ 15ರ ನಂತರವೂ ಮಳೆ ಕೊರತೆಯಾಗುವ ಮುನ್ಸೂಚನೆ ಇರುವುದರಿಂದ, ಹೆಚ್ಚಿನ ಕಡೆಗಳಲ್ಲಿ ಮರು ಬಿತ್ತನೆಗೆ (ಡಿಜ-ಂತಿಟಿರ ) ಅವಕಾಶಗಳು ಕಡಿಮೆ ಇವೆ. ಬಿತ್ತನೆಯಾಗದೇ ಉಳಿದ ಪ್ರದೇಶದಲ್ಲಿ ಕಡಿಮೆ ಅವಧಿಯ ಪರ್ಯಾಯ ತಳಿಗಳಾದ ಈರುಳ್ಳಿ ಅಥವಾ ಅಲ್ಪಾವಧಿ ತರಕಾರಿ ಬೆಳೆಗಳನ್ನು ಬೆಳೆಯಲು ರೈತರಿಗೆ ಕೃಷಿ ಇಲಾಖೆಯಿಂದ ತಕ್ಷಣವೇ ಸೂಕ್ತ ತಾಂತ್ರಿಕ ಮಾರ್ಗದರ್ಶನ ಹಾಗೂ ಜಾಗೃತಿ ಮೂಡಿಸಬೇಕು ಎಂದರು.

ಜಿಲ್ಲೆಯಲ್ಲಿ ಇತ್ತೀಚೆಗೆ ಅಲ್ಲಲ್ಲಿ ಬೀಳುತ್ತಿರುವ ಸಾಧಾರಣ ಮಳೆಯಿಂದಾಗಿ ರೈತರಲ್ಲಿ ಸಣ್ಣದೊಂದು ಆಶಾಭಾವನೆ ಮೂಡಿದೆ ಎಂದರು. ಜಿಲ್ಲೆಯಲ್ಲಿ ಸದ್ಯ ಶೇಕಡಾ 20 ರಿಂದ 30 ರಷ್ಟು ಭಾಗಗಳಲ್ಲಿ ಮಾತ್ರ ಮೊಳಕೆಯೊಡೆದ ಸಸಿಗಳು ಹಸಿರಾಗಿವೆ. ಇನ್ನುಳಿದ ಕೆಲವು ಭಾಗಗಳಲ್ಲಿ ಶೇಕಡಾ 20 ರಿಂದ 30 ರಷ್ಟು ಜರ್ಮಿನೇಷನ್ (ಮೊಳಕೆಯೊಡೆಯುವಿಕೆ) ಪ್ರಕ್ರಿಯೆ ಸಂಪೂರ್ಣ ಒಣಗಿಹೋಗಿದ್ದು, ಇನ್ನುಳಿದ ಭಾಗಗಳಲ್ಲಿ ಮಳೆಯ ಕೊರತೆಯಿಂದಾಗಿ ಬೆಳೆಗಳು ಬಾಡುತ್ತಿವೆ ಎಂದು ಕಳವಳ ಜಿಲ್ಲಾಧಿಕಾರಿಗಳು ವ್ಯಕ್ತಪಡಿಸಿದರು. ಮುಂದಿನ ದಿನಗಳಲ್ಲಿ ಉತ್ತಮ ಮಳೆಯಾದರೆ ಮಾತ್ರ ಶೇಕಡಾ 40 ರಿಂದ 50 ರಷ್ಟು ಇಳುವರಿ ನಿರೀಕ್ಷಿಸಬಹುದಾಗಿದೆ ಎಂದು ಅವರು ತಿಳಿಸಿದರು.

ರೈತರಿಗೆ ರಸಗೊಬ್ಬರ ವಿತರಣೆಯಲ್ಲಿ ಯಾವುದೇ ರೀತಿಯ ತೊಂದರೆಯಾಗದಂತೆ ಹಾಗೂ ಕೃತಕ ಅಭಾವ ಸೃಷ್ಟಿಯಾಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಜಂಟಿ ಕೃಷಿ ನಿರ್ದೇಶಕರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಒಂದು ವೇಳೆ ಜಿಲ್ಲೆಯಲ್ಲಿ ಮಳೆ ಹೆಚ್ಚಾದಲ್ಲಿ ಗೊಬ್ಬರದ ಬೇಡಿಕೆಯೂ ಹೆಚ್ಚಾಗುವ ಸಂಭವವಿದ್ದು ಪರಿಸ್ಥಿತಿಗೆ ತಕ್ಕಂತೆ ರಸಗೊಬ್ಬರದ ದಾಸ್ತಾನು ಇಟ್ಟುಕೊಳ್ಳಲು ಕ್ರಮ ವಹಿಸಬೇಕೆಂದು ಕೃಷಿ ಇಲಾಖೆಯ ಅಧಿಕಾರಿಗಳು ಜಿಲ್ಲಾಧಿಕಾರಿ ಸೂಚಿಸಿದರು.

ರೈತರಿಗೆ ಬೆಳೆ ವಿಮೆಯ ಸೌಲಭ್ಯ ಸಮರ್ಪಕವಾಗಿ ತಲುಪುವಂತೆ ಕೃಷಿ ಇಲಾಖೆಯ ನೋಡಿಕೊಳ್ಳಬೇಕು. ಪ್ರಮುಖವಾಗಿ ಬೆಳೆ ಸಾಲ ಪಡೆಯುವ ರೈತರಿಗೆ ವಿಮೆಯಿಂದ ಹೊರಗುಳಿಯಲು ಇರುವ 'ಆಪ್ಟ್-ಔಟ್' ಆಯ್ಕೆಯ ಕುರಿತು ಚರ್ಚಿಸಿ, ರೈತರು ತಮಗೆ ಇಷ್ಟವಿರುವ ಅಥವಾ ತಾವು ಬೆಳೆದ ಬೆಳೆಗೆ ಮಾತ್ರ ವಿಮೆ ಮಾಡಿಸಲು ಇರುವ ತಾಂತ್ರಿಕ ತೊಂದರೆಗಳನ್ನು ನಿವಾರಿಸಲು ಹಾಗೂ ಸರ್ಕಾರದ ನಿಯಮಾವಳಿಗಳಂತೆ ರೈತರಿಗೆ ಗರಿಷ್ಠ ಅನುಕೂಲ ಮಾಡಿಕೊಡಲು ಜಿಲ್ಲಾಧಿಕಾರಿ ಸೂಚನೆ ನೀಡಿದರು .

ಜಿಲ್ಲೆಯ ಎಲ್ಲಾ ತಹಶೀಲ್ದಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಿ, ಬೆಳೆ ಸಮೀಕ್ಷೆಯನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕು. ಈ ಕಾರ್ಯದಲ್ಲಿ ಯಾವುದೇ ರೀತಿಯ ನಿರ್ಲಕ್ಷ ವನ್ನು ಸಹಿಸುವುದಿಲ್ಲ" ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಬ್ಯಾಂಕ್‌ಗಳ ಮೂಲಕ ಸಾಲ ಪಡೆದ ಹಾಗೂ ಸಾಲ ಪಡೆಯದ ರೈತರಿಗೆ ಬೆಳೆ ವಿಮೆ ಕಡ್ಡಾಯವಾಗಿ ತಲುಪುವಂತಾಗಬೇಕು. ವಿಮಾ ಯೋಜನೆಗೆ ನೋಂದಾಯಿಸಿಕೊಳ್ಳಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಗರಿಷ್ಠ ಸಂಖ್ಯೆಯ ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಬ್ಯಾಂಕ್‌ಗಳು ಹಾಗೂ ಕೃಷಿ ಇಲಾಖೆ ಸಮನ್ವಯತೆಯಿಂದ ಕೆಲಸ ಮಾಡಬೇಕು. ರೈತರಲ್ಲಿ ಈ ಕುರಿತು ವ್ಯಾಪಕ ಜಾಗೃತಿ ಮೂಡಿಸಬೇಕೆಂದರು.

# ಸೋಲಾಪುರ-ವಾಡಿ ವಿಭಾಗದಲ್ಲಿ ಮೊದಲ ಬಾರಿಗೆ ಸ್ಟ್ಯಾಂಡರ್ಡ್ ಕವಚ್ ಕಾರ್ಯಾರಂಭ ರೈಲ್ವೆ ಸುರಕ್ಷತೆಯ ಆಧುನೀಕರಣದಲ್ಲಿ ಪ್ರಮುಖ ಮೈಲಿಗಲ್ಲು ಸಾಧಿಸಿದೆ

ಸೋಲಾಪುರ, ಜುಲೈ 09-ಮಧ್ಯ ರೈಲ್ವೆಯ ಸೋಲಾಪುರ ವಿಭಾಗವು ಸೋಲಾಪುರ-ವಾಡಿ ವಿಭಾಗದಲ್ಲಿ ಸ್ಟ್ಯಾಂಡರ್ಡ್ ಕವಚ್ ವ್ಯವಸ್ಥೆಯನ್ನು ಯಶಸ್ವಿಯಾಗಿ ಕಾರ್ಯಾರಂಭ ಮಾಡಿದೆ. ಇದು 149.476 ಕಿಲೋಮೀಟರ್ ಮಾರ್ಗವನ್ನು ಒಳಗೊಂಡಿದೆ. ಈ ಸಾಧನೆಯು ಸೋಲಾಪುರ ವಿಭಾಗದಲ್ಲಿ ಸ್ಟ್ಯಾಂಡರ್ಡ್ ಕವಚ್ ವ್ಯವಸ್ಥೆಯ ಮೊದಲ ಕಾರ್ಯಾರಂಭವಾಗಿದೆ ಮತ್ತು ಇದು ರೈಲ್ವೆ ಸುರಕ್ಷತೆಯ ಆಧುನೀಕರಣದಲ್ಲಿ ಪ್ರಮುಖ ಮೈಲಿಗಲ್ಲು ಸಾಧಿಸಿದೆ ಎಂದು

ಮಧ್ಯ ರೈಲ್ವೆ ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆಯು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಏಂಗಿಂಅಊ ಭಾರತ ಸರ್ಕಾರದ ಆತ್ಮನಿರ್ಭರ ಭಾರತ್ ಉಪಕ್ರಮದ ಅಡಿಯಲ್ಲಿ ಸ್ಥಳೀಯವಾಗಿ ಅಭಿವೃದ್ಧಿಪಡಿಸಲಾದ ಸ್ವಯಂಚಾಲಿತ ರೈಲು ರಕ್ಷಣೆ (ಂಖಿಕ) ವ್ಯವಸ್ಥೆಯಾಗಿದೆ. ರೈಲ್ವೆ ಜಾಲದಲ್ಲಿ ಸುರಕ್ಷತೆಯನ್ನು ಗಮನಾರ್ಹವಾಗಿ ಹೆಚ್ಚಿಸಲು ವಿನ್ಯಾಸಗೊಳಿಸಲಾದ ಈ ವ್ಯವಸ್ಥೆಯು ಮುಖಾಮುಖಿ ಡಿಕ್ಕಿಗಳು ಮತ್ತು ಹಿಂಭಾಗದ ಡಿಕ್ಕಿಗಳ ವಿರುದ್ಧ ದೃಢವಾದ ರಕ್ಷಣೆಯನ್ನು ಒದಗಿಸುತ್ತದೆ, ಜೊತೆಗೆ ಬ್ಲಾಕ್ ವಿಭಾಗಗಳಲ್ಲಿ ಅಸಾಮಾನ್ಯ ನಿಲುಗಡೆಗಳ ಸಂದರ್ಭದಲ್ಲಿ ಲೋಕೋಮೋಟಿವ್‌ಗಳಿಂದ ಸ್ವಯಂಚಾಲಿತ ಖಔಖ ಎಚ್ಚರಿಕೆಗಳನ್ನು ಸಕ್ರಿಯಗೊಳಿಸುತ್ತದೆ. ಜೊತೆಗೆ ಅಗತ್ಯವಿದ್ದಾಗ ಲೊಕೊ ಪೈಲಟ್‌ನಿಂದ ಹಸ್ತಚಾಲಿತ ಖಔಖ ಕಾರ್ಯನಿರ್ವಹಣೆಯನ್ನು ಸಹ ಸಕ್ರಿಯಗೊಳಿಸುತ್ತದೆ.ಸ್ಟ್ಯಾಂಡರ್ಡ್ ಏಂಗಿಂಅಊ ವ್ಯವಸ್ಥೆಯು ಸಿಗ್ನಲಿಂಗ್ ಆಧಾರಿತವಲ್ಲದ ಏಂಗಿಂಅಊ ವ್ಯವಸ್ಥೆಯಾಗಿದೆ. ಈ ವ್ಯವಸ್ಥೆಯು ಏಂಗಿಂಅಊ-ಸಜ್ಜಿತ ಲೋಕೋಮೋಟಿವ್‌ಗಳು ಮತ್ತು ರೈಲ್ವೆ ಮೂಲಸೌಕರ್ಯದ ನಡುವಿನ ನಿರಂತರ ಸಂವಹನದ ಮೂಲಕ ಕಾರ್ಯನಿರ್ವಹಿಸುತ್ತದೆ. ಇದು ಸುಧಾರಿತ ಖಈಖಆ (ರೇಡಿಯೊ-ಫ್ರೀಕ್ವೆನ್ಸಿ ಐಡೆಂಟಿಫಿಕೇಶನ್) ಆಧಾರಿತ ಟ್ರ್ಯಾಕ್ ಗುರುತಿನ ತಂತ್ರಜ್ಞಾನದಿಂದ ಬೆಂಬಲಿತವಾಗಿದೆ. ನಿಖರವಾದ ರೈಲು ಸ್ಥಾನೀಕರಣ ಮತ್ತು ವರ್ಧಿತ ಕಾರ್ಯಾಚರಣೆಯ ಸುರಕ್ಷತೆಯನ್ನು ಖಚಿತಪಡಿಸುತ್ತದೆ. ಯೋಜನೆಯ ಭಾಗವಾಗಿ, ಸೋಲಾಪುರ-ವಾಡಿ ಬ್ಲಾಕ್ ವಿಭಾಗಗಳಾದ್ಯಂತ ಅನುಮೋದಿತ ವಿನ್ಯಾಸಕ್ಕೆ ಅನುಗುಣವಾಗಿ ಒಟ್ಟು 1,234 ಖಈಖಆ ಟ್ಯಾಗ್‌ಗಳನ್ನು ಎಚ್ಚರಿಕೆಯಿಂದ ಸ್ಥಾಪಿಸಲಾಗಿದೆ ಮತ್ತು ಪ್ರೋಗ್ರಾಮ್ ಮಾಡಲಾಗಿದೆ ಎಂದು ತಿಳಿಸಿದೆ.




ವಿವಿಧ ಕಾರ್ಯಾಚರಣಾ ಪರಿಸ್ಥಿತಿಗಳಲ್ಲಿ ಹೆಡ್-ಆನ್ ಡಿಕ್ಕಿ ತಡೆಗಟ್ಟುವಿಕೆ, ಹಿಂಭಾಗದ ಡಿಕ್ಕಿ ತಡೆಗಟ್ಟುವಿಕೆ ಮತ್ತು ಖಔಖ ಉತ್ಪಾದನೆಯ ಸಾಮರ್ಥ್ಯಗಳ ಕಠಿಣ ಪರೀಕ್ಷೆ ಸೇರಿದಂತೆ ಖಆಖಔ (ಸಂಶೋಧನಾ ವಿನ್ಯಾಸಗಳು ಮತ್ತು ಮಾನದಂಡಗಳ ಸಂಸ್ಥೆ) ಮಾನದಂಡಗಳಿಗೆ ಅನುಸಾರವಾಗಿ ಸಮಗ್ರ ಮೌಲ್ಯೀಕರಣ ಮತ್ತು ಕ್ಷೇತ್ರ ಪ್ರಯೋಗಗಳನ್ನು ಸಹ ನಡೆಸಲಾಯಿತು. ಈ ಕಠಿಣ ಪರೀಕ್ಷೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸುವುದರಿಂದ ವ್ಯವಸ್ಥೆಯ ವಿಶ್ವಾಸಾರ್ಹತೆ ಮತ್ತು ಕಾರ್ಯಾಚರಣೆಯ ನಿಯೋಜನೆಗೆ ಸಿದ್ಧತೆಯನ್ನು ದೃಢಪಡಿಸುತ್ತದೆ.

ಅತ್ಯಾಧುನಿಕ ಸುರಕ್ಷತಾ ವ್ಯವಸ್ಥೆಯ ಕಾರ್ಯಾರಂಭ ಕಾರ್ಯವನ್ನು ಸೋಲಾಪುರ ವಿಭಾಗದ ಯೋಜನಾ ಘಟಕದ ಸಿಗ್ನಲ್ ಮತ್ತು ದೂರಸಂಪರ್ಕ ಇಲಾಖೆ ಯಶಸ್ವಿಯಾಗಿ ನಡೆಸಿತು. ಸುಧಾರಿತ ಸ್ಥಳೀಯ ತಂತ್ರಜ್ಞಾನವನ್ನು ಬಳಸಿಕೊಳ್ಳುವ ಮೂಲಕ, ಈ ವ್ಯವಸ್ಥೆಯು ಕಾರ್ಯಾಚರಣೆಯ ವಿಶ್ವಾಸಾರ್ಹತೆಯನ್ನು ಹೆಚ್ಚಿಸುತ್ತದೆ, ರೈಲು ಸುರಕ್ಷತೆಯನ್ನು ಸುಧಾರಿಸುತ್ತದೆ ಮತ್ತು ಪ್ರಯಾಣಿಕರು ಮತ್ತು ಸರಕು ಸಾಗಣೆಗೆ ಹೆಚ್ಚು ಪರಿಣಾಮಕಾರಿ ಮತ್ತು ವಿಶ್ವಾಸಾರ್ಹ ರೈಲ್ವೆ ಸೇವೆಗಳಿಗೆ ಕೊಡುಗೆ ನೀಡುತ್ತದೆ.



# ಬಾಲ ಕಾರ್ಮಿಕ ಪದ್ಧತಿ ವಿರೋಧಿ ಜಾಥಾಕ್ಕೆ ಚಾಲನೆ

ಜೇವರ್ಗಿ: ಬಾಲ ಕಾರ್ಮಿಕ ಪದ್ದತಿ ವಿರೋಧಿ ದಿನದ ಅಂಗವಾಗಿ ಜೇವರ್ಗಿ ಕೋರ್ಟ್ ಆವರಣದಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ ಜಾಗೃತಿ ಜಾಥಾಕ್ಕೆ ಜೇವರ್ಗಿ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು, ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷ ತಯ್ಯಬಾ ಸುಲ್ತಾನಾ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಬಾಲ ಕಾರ್ಮಿಕ ಪದ್ಧತಿಯ ನಿರ್ಮೂಲನೆ ಕುರಿತು ಜಾಗೃತಿ ಮೂಡಿಸಲಾಯಿತು. ಮಕ್ಕಳನ್ನುಕೆಲಸಕ್ಕೆ ಬಳಸಿಕೊಳ್ಳುವುದು ಕಾನೂನು ಬಾಹಿರವಾಗಿದ್ದು, ಪ್ರತಿಯೊಬ್ಬರೂ ಮಕ್ಕಳ ಶಿಕ್ಷಣ ಮತ್ತು ಹಕ್ಕುಗಳ ರಕ್ಷಣೆಗೆ ಮುಂದಾಗಬೇಕು ಎಂಬ ಸಂದೇಶವನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಅಧ್ಯಕ್ಷರು,ಶಾಂತಗೌಡ ಪಾಟೀಲ್ ನರಿಬೋಳ ಉಪಾಧ್ಯಕ್ಷರುಭಾಷ ಪಟೇಲ್ ಮಾಲಿ ಪಾಟೀಲ್ ಯಾಳವಾರ , ಕಾರ್ಯ ದರ್ಶಿ ರಾಜಶೇಖರ್ ಶಿಲ್ಪಿ ಸರಕಾರಿ ಅಭಿಯೋಜಕರು,ಹಿರಿಯ ಕಾರ್ಮಿಕ ನಿರೀಕ್ಷಕ ಕೆ.ಎಸ್. ಪ್ರಸನ್ನ, ಸಂಸ್ಕಾರ ಪ್ರತಿಷ್ಠಾನ ಸಂಸ್ಥೆಯ ನಿರ್ದೇಶಕ ವಿಠಲ ಚಿಕಣಿ, ಮಾರ್ಗ ದರ್ಶಿ ಸಂಸ್ಥೆ ಮಕ್ಕಳ ಸಹಾಯವಾಣಿ ಸಂಸ್ಥೆಯ ಪ್ರತಿನಿಧಿಗಳು ಹಾಗೂ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ನಿರ್ದೇಶಕ ಸಂತೋಷ ಕುಲಕರ್ಣಿ ಉಪಸ್ಥಿತರಿದ್ದರು.

# ಕಾಂಗ್ರೆಸ್‌ನಿಂದ ಹಿಂದುಳಿದ ವರ್ಗಗಳ ಶ್ರೇಯೋಭಿವೃದ್ಧಿಯ ಕಗ್ಗೊಲೆ

ವಿಜಯಪುರ: ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಕಿಂಚಿತ್ತೂ ಅಭಿವೃದ್ಧಿ ಕಾರ್ಯ ಅನುಷ್ಠಾನಗೊಳಿಸದೇ ಕಾಂಗ್ರೆಸ್ ಹಾಗೂ ಸಿದ್ಧರಾಮಯ್ಯ ಅವರು ಹಿಂದುಳಿದ ವರ್ಗಗಳ ಶ್ರೇಯೋಭಿವೃದ್ಧಿಯ ಕಗ್ಗೊಲೆ ಮಾಡಿದ್ದಾರೆ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಡಿ. ಲಕ್ಷ್ಮೀನಾರಾಯಣ ಅಸಮಾಧಾನ ಹೊರಹಾಕಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಧುಸೂಧನ ನಾಯಕ ಅವರು ನೀಡಿರುವ ವರದಿಯನ್ನು ಗೌಪ್ಯವಾಗಿ ಇರಿಸಿದೇ ಅದನ್ನು ಸದನದಲ್ಲಿ ಮಂಡನೆ ಮಾಡಲೇಬೇಕು, ಅದರ ಸಮಗ್ರ ಚರ್ಚೆಗೊಳಪಡಿಸಬೇಕು, ಇಲ್ಲವಾದರೆ ಹಿಂದುಳಿದ ವರ್ಗಗಳಿಗೆ ನ್ಯಾಯ ಒದಗಿಸುವ ದೃಷ್ಟಿಯಿಂದ ವಿಧಾನಸಭೆಗೆ ಮುತ್ತಿಗೆ ಹಾಕಲು ನಾವು ಹಿಂದೇಟು ಹಾಕುವುದಿಲ್ಲ, ಕೂಡಲೇ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಿಂದುಳಿದ ವರ್ಗಕ್ಕೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಹಿಂದುಳಿದ ವರ್ಗಗಳು ಕಾಂಗ್ರೆಸ್ ಅವಧಿಯಲ್ಲಿ ತತ್ತರಿಸಿ ಹೋಗಿವೆ, ಕಾಂಗ್ರೆಸ್ ಸರ್ಕಾರ ಹಿಂದುಳಿದ ವರ್ಗಗಳ ಆಯೋಗದ ವರದಿಯನ್ನು ಸ್ವೀಕರಿಸಲೇ ಇಲ್ಲ, ಹಿಂದುಳಿದ ವರ್ಗಗಳಿಗೆ ನ್ಯಾಯ ಒದಗಿಸುವುದಾಗಿ ಹೇಳಿ ಅಧಿಕಾರ ನಡೆಸಿದ ಸಿದ್ಧರಾಮಯ್ಯ ಅಧಿಕಾರದಲ್ಲಿದ್ದಾಗ ಹಿಂದುಳಿದ ವರ್ಗಗಳ ಬಗ್ಗೆ ಚಕಾರ ಎತ್ತದೇ ದೊಡ್ಡ ಅನ್ಯಾಯ ಮಾಡಿದ್ದಾರೆ, ಬಜೆಟ್‌ನಲ್ಲಿ ಕೇವಲ 100 ಕೋಟಿ ರೂ. ಮೀಸಲಿರಿಸುವ ಮೂಲಕ ಮೂಗಿಗೆ ತುಪ್ಪ ಒರೆಸುವ ಕಾರ್ಯ ಮಾಡಿದ ಅವರಿಗೆ ಹಿಂದುಳಿದ ವರ್ಗ ಹಾಗೂ ದೇವರು ಮೆಚ್ಚುವುದಿಲ್ಲ ಎಂದರು.

ಬಿಹಾರ, ತೆಲಂಗಾಣ ಸೇರಿದಂತೆ ಎಲ್ಲ ರಾಜ್ಯಗಳು ಹಿಂದುಳಿದ ವರ್ಗಗಳಿಗೆ ನ್ಯಾಯ ಒದಗಿಸುವ ಕೆಲಸ ಮಾಡಿವೆ, ಅಹಿಂದ ವರ್ಗದ ಐಕಾನ್ ಆಗಿದ್ದ ಸಿದ್ಧರಾಮಯ್ಯ ಅವರು ಮಾತ್ರ ಎರಡು ಅವಧಿಯಲ್ಲಿಯೂ ಹಿಂದುಳಿದ ವರ್ಗಕ್ಕೆ ಆದ್ಯತೆ ನೀಡಲೇ ಇಲ್ಲ ಎಂದು ಅಸಮಾಧಾನ ಹೊರಹಾಕಿದರು.

ಶಾಸಕ ಯತ್ನಾಳ ಅವರನ್ನು ಪಕ್ಷಕ್ಕೆ ಕರೆ ತರುವ ವಿಷಯವಾಗಿ ನಾನು ಪ್ರತಿಕ್ರಿಯೆ ನೀಡಲು ಅಸಾಧ್ಯ, ಪಕ್ಷದ ವರಿಷ್ಠರು ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳುತ್ತಾರೆ, ಇದು ಪಕ್ಷದ ಆಂತರಿಕ ವಿಷಯ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಯಾರಿಗೂ ತಡೆಯುವಂತಿಲ್ಲ,

ಈಗಿರುವ ಸಿಎಂ ಮೇಲೆ ಭರವಸೆ ಇಲ್ಲ ಎಂದರು. ಬಿಜೆಪಿ ಮುಖಂಡರಾದ ಶರಣು ತಳಕೇರಿ ಮಾತನಾಡಿ, ಈಗಿರುವ ಮುಖ್ಯಮಂತ್ರಿಗಳು ಹಿಂದುಳಿದ ವರ್ಗಗಳಿಗೆ ನ್ಯಾಯ ಒದಗಿಸುತ್ತಾರೆ ಎಂಬ ಭರವಸೆ ನಮಗಿಲ್ಲ, ಈ ಹಿಂದೆ ಬಹಿರಂಗವಾಗಿಯೇ ಕಾಂತರಾಜ್ ಆಯೋಗದ ವರದಿಯ ಬಗ್ಗೆ ಅಪಸ್ವರ ಹಾಕಿದ ಅವರು ಹಿಂದುಳಿದ ವರ್ಗಗಳಿಗೆ ನ್ಯಾಯ ಒದಗಿಸುತ್ತಾರೆ ಎಂಬ ವಿಶ್ವಾಸ ನಮಗಿಲ್ಲ, ಈ ವಿಷಯದಲ್ಲಿ ಸಿದ್ಧರಾಮಯ್ಯ ಮೌನ ವಹಿಸಬಾರದು, ತಾವೇ ರೂಪಿಸಿದ ವರದಿಯನ್ನು ಸಿದ್ಧರಾಮಯ್ಯ ಒಪ್ಪಬೇಕು, ಅವರ ಮೌನ ಅನೇಕ ಸಂಶಯಗಳಿಗೆ ಕಾರಣವಾಗಿದೆ ಎಂದರು. ಹಿಂದುಳಿದ ವರ್ಗಗಳ ನೇತಾರ ಡಿ.ದೇವರಾಜ್ ಅರಸು ಅವರ ದಾಖಲೆ ಮುರಿದಿರುವೆ ಎಂದು ಅಹಂಕಾರದಿಂದ ಬೀಗುತ್ತಿರುವ ಸಿದ್ಧರಾಮಯ್ಯ ಅವರು ರಾಜಿನಾಮೆ ನೀಡುವ ಮುನ್ನ ತರಾತುರಿಯಲ್ಲಿ ಹಿಂದುಳಿದ ವರ್ಗಗಳ ಆಯೋಗದ ವರದಿ ಸ್ವೀಕರಿಸಿ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಅನ್ಯಾಯ ಮಾಡಿದ್ದಾರೆ ಎಂದರು. ತೆಲಂಗಾಣದಲ್ಲಿ 75 ದಿನದಲ್ಲಿ ಹಿಂದುಳಿದ ವರ್ಗಗಳ ಸಮೀಕ್ಷೆ ಪೂರ್ಣಗೊಳಿಸಿದ್ದಾರೆ, ಆದರೆ ಇಲ್ಲಿರುವ ಕಾಂಗ್ರೆಸ್ ಸರ್ಕಾರ ದುರುದ್ದೇಶಪೂರ್ವಕವಾಗಿ ಹಿಂದುಳಿದ ವರ್ಗಗಳ ವರದಿಯನ್ನು ಸ್ವೀಕರಿಸುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದೆ ಎಂದರು.



ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ರಾಜ್ಯ ಉಪಾಧ್ಯಕ್ಷ ವಿವೇಕಾನಂದ ಡಬ್ಬಿ, ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಬಿಜೆಪಿ ಮುಖಂಡರಾದ ಸಾಬು ಮಾಶ್ಯಾಳ, ರಾಜಕುಮಾರ ಸಗಾಯಿ, ಶಿವರುದ್ರ ಬಾಗಲಕೋಟ, ವಿಜಯ ಜೋಶಿ ಮೊದಲಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಮಕ್ಕಳಲ್ಲಿ ಸಂಸ್ಕೃತಿ ಮತ್ತು ಸುಸಂಸ್ಕೃತಿ

## ನಾವು - ನಮ್ಮವರು

### (ಮಕ್ಕಳ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಕುರಿತ ಲೇಖನ ಮಾಲಿಕೆ)

■ ಉದಯರಶ್ಮಿ ದಿನಪತ್ರಿಕೆ






ಹುಟ್ಟಿದ ಪ್ರತಿಯೊಬ್ಬ ಮನುಷ್ಯನು ತಾನು ವಾಸಿಸುತ್ತಿರುವ ಪರಿಸರ, ಪ್ರಕೃತಿ ಸಮಾಜ, ಸಂಸ್ಕೃತಿ, ಕುಟುಂಬ ಪರಿವಾರ ಹೀಗೆ ಎಲ್ಲರೊಂದಿಗೆ ಒಂದು ಅನನ್ಯ, ಆತ್ಮೀಯ ಭಾವವನ್ನು ಹೊಂದಿರುತ್ತಾನೆ. ತನ್ನ ಬದುಕಿನ ಎಲ್ಲಾ ಆಗು ಹೋಗುಗಳಿಗೆ ಸ್ಪಂದಿಸುವ ಪ್ರತಿಕ್ರಿಯಿಸುವ ಎಲ್ಲರೊಂದಿಗೆ ಮನುಷ್ಯ ಕೃತಜ್ಞತಾ ಭಾವವನ್ನು ಹೊಂದಿರಲೇಬೇಕು.

ಯಾವುದೇ ಒಂದು ಕಟ್ಟಡವನ್ನು ಕಟ್ಟುವಾಗ ಕಂಬಗಳನ್ನು ನಿರ್ಮಿಸುತ್ತಾರೆ. ಇದನ್ನು ಸ್ಟ್ರಕ್ಚರ್ ಅಥವಾ ಸಂರಚನೆ ಎಂದು ಕರೆಯುತ್ತೇವೆ. ಈ ರಚನೆಯ ಆಧಾರದ ಮೇಲೆ ಕಟ್ಟಡದ ಉಳಿದ ನಿರ್ಮಾಣ ಕಾರ್ಯ ನಡೆಯುತ್ತದೆ. ಈ ಕಂಬ (ಕಾಲಂ) ಗಳ ಸಂರಚನೆ ಸರಿಯಾಗಿರದಿದ್ದರೆ, ಅದೆಷ್ಟೇ ಚೆನ್ನಾಗಿ ಕಟ್ಟಿದರೂ ಕಟ್ಟಡ ತನ್ನ ಗಟ್ಟಿತನವನ್ನು, ರಚನಾತ್ಮಕತೆಯನ್ನು ಉಳಿಸಿಕೊಳ್ಳಲು ಸಾಧ್ಯವಾಗುವುದಿಲ್ಲ ಅಲ್ಲವೇ?

ಹಾಗೆಯೇ ಮಕ್ಕಳಲ್ಲಿ ಸಂಸ್ಕಾರ ಎಂಬ ಉತ್ತಮ ಅಡಿಪಾಯವನ್ನು ಹಾಕಿ ಸುಸಂಸ್ಕೃತಿಯನ್ನು ಬೆಳೆಸಬೇಕು. ಕುಟುಂಬದ ಹಿರಿಯರು ಹೇಳುವ ಮಾತುಗಳನ್ನು ಮಕ್ಕಳು ಕಡ್ಡಾಯವಾಗಿ ಪಾಲಿಸಲೇಬೇಕು ಎಂಬ ಅಲಿಖಿತ ನಿಯಮ ಮನೆಯಲ್ಲಿ ಜಾರಿಯಲ್ಲಿದ್ದರೆ, ಮಕ್ಕಳು ತಮ್ಮ ಹಿರಿಯರನ್ನು ಗೌರವಿಸುವರು. ಅವರ ಮಾತುಗಳಿಗೆ ಒಡಂಬಡುವರು. ಪರಿವಾರದ ಭದ್ರ ಬುನಾದಿ ಪರಿವಾರವು ಹಾಕಿ ಕೊಡುವ ಸಂಸ್ಕೃತಿ, ಸಂಸ್ಕಾರಗಳನ್ನು



ಪಾಲಿಸುವುದರಲ್ಲಿ ಇದೆ.

ಸಂಸ್ಕೃತಿ ಎನ್ನುವುದು ನಮ್ಮ ಜೀವನದ ಅವಿಭಾಜ್ಯ ಅಂಗ, ಕುಟುಂಬದ ಸರ್ವತೋಮುಖ ಬೆಳವಣಿಗೆ ಮತ್ತು ಕುಟುಂಬದಲ್ಲಿ ಉತ್ತಮ ಸಂವಹನ ನಡೆಯಲು ಬೇಕಾಗಿರುವುದು ಕುಟುಂಬದ ಸಂಸ್ಕೃತಿಯ ಪಾಲನೆ.

ಹಿರಿಯರ ಕುರಿತಾದ ಈ ರೀತಿಯ ಕೃತಜ್ಞತಾ ಭಾವವನ್ನು ಸೂಚಿಸುವುದೇ ಸುಸಂಸ್ಕೃತಿಯಾಗಿದ್ದು ಇದು ಕುಟುಂಬದ ಏಕತೆಯನ್ನು ತೋರುತ್ತದೆ.

ಕುಟುಂಬ ಚೆನ್ನಾಗಿದ್ದರೆ ಇಡೀ ದೇಶವು ಚೆನ್ನಾಗಿರುತ್ತೆ ಎಂಬ ಮಾತನ್ನು ನಮ್ಮ ಮಾಜಿ ರಾಷ್ಟ್ರಪತಿ ಡಾ. ಎ ಪಿ ಜೆ ಅಬ್ದುಲ್ ಕಲಾಮ್ ಅವರು ಹೇಳಿದ್ದಾರಷ್ಟೇ. ಸಾಮೂಹಿಕ ಶಿಸ್ತು ಮತ್ತು ಬದ್ಧತೆಯುಳ್ಳ ಕುಟುಂಬ ಅತ್ಯಂತ ಸಮತೋಲನವನ್ನು ಕಾಯ್ದುಕೊಂಡು ಹೋಗುತ್ತವೆ.

ಕೌಟುಂಬಿಕ ಸಂಪ್ರದಾಯಗಳು ತಲೆತಲಾಂತರವಾಗಿ ಪಾಲಿಸಲ್ಪಡಬೇಕು. ಕುಟುಂಬದ ಕೆಲ ಮೂಲಭೂತ ವಿಷಯಗಳನ್ನು ನಾವು ಸರಿಯಾಗಿ ಪಾಲಿಸಿದ್ದೇ ಆದರೆ ಕುಟುಂಬದಲ್ಲಿ ಮಾನಸಿಕ ಶಾಂತಿ, ನೆಮ್ಮದಿ ಮತ್ತು ಸಂತೃಪ್ತಿ ಸದಾ ನೆಲೆಸಿರುತ್ತದೆ.

ಮನೆಯ ಎಲ್ಲಾ ಸದಸ್ಯರು ಒಟ್ಟಿಗೆ ಕುಳಿತು ಊಟ ಮಾಡುವುದರ ಮೂಲಕ ಸಾಂಸಾರಿಕ ಒಗ್ಗಟ್ಟು, ಪ್ರೀತಿ, ವಿಶ್ವಾಸ ಬೆಳೆಯುತ್ತದೆ. ಎಲ್ಲರ ಬೇಕು ಬೇಡಗಳ ಅರಿವು ಉಂಟಾಗುತ್ತದೆ.

ಇದರ ಜೊತೆಗೆ ಒಟ್ಟಾಗಿ ಆಹಾರವನ್ನು ಸೇವಿಸುವುದರಿಂದ ಆಹಾರವನ್ನು ಪದೇ ಪದೇ ಬಿಸಿ ಮಾಡುವ, ಬಡಿಸುವ ಶ್ರಮವು ಕಡಿಮೆಯಾಗುವುದಲ್ಲದೇ ಆಹಾರ ಪೋಲಾಗುವುದು ಕೂಡ ತಪ್ಪುತ್ತದೆ. ಒಟ್ಟಾಗಿ ಊಟ ಮಾಡುವಾಗ ಆಹಾರದ ವಿತರಣೆ ಸರಿಯಾಗಿ ಆಗುತ್ತದೆ, ಆಹಾರವನ್ನು ಕೆಡಿಸದೆ ಉಣ್ಣುವುದು ಕೂಡ ಒಳ್ಳೆಯ ಸಂಸ್ಕೃತಿಯ ಲಕ್ಷಣ.

ಮನೆಯ ಕೆಲಸಗಳನ್ನು ಮನೆಯ ಸದಸ್ಯರೆಲ್ಲರೂ ಒಟ್ಟುಗೂಡಿ ಹಂಚಿಕೊಂಡು ಮಾಡುವಾಗ ಅವರಲ್ಲಿ ಒಗ್ಗಟ್ಟು ಮೂಡುತ್ತದೆ. ಕೆಲಸದ ಹಂಚಿಕೆ ಕೆಲಸದ ಶ್ರಮವನ್ನು ಕೂಡ ಕಡಿಮೆ ಮಾಡುತ್ತದೆ, ಪರಸ್ಪರರಲ್ಲಿ ಅನುಸರಣ ಭಾವ ಮತ್ತು ಉತ್ತಮ ಸಂವಹನ ಕ್ರಿಯೆ ಬೆಳೆಯುತ್ತದೆ. ಮಾನಸಿಕ ಬಂಧಗಳು ಹೆಚ್ಚು ಸದೃಢವಾಗುತ್ತವೆ.

ಪ್ರತಿಯೊಂದು ಮನೆಯೊ ತನ್ನದೇ ಆದ ಸಂಸ್ಕೃತಿ, ಸಂಸ್ಕಾರಗಳನ್ನು ಹೊಂದಿದ್ದು ಮಕ್ಕಳು ತಮ್ಮ ಮನೆಯ ಎಲ್ಲಾ ರೀತಿ ರಿವಾಜುಗಳಿಗೆ ಪರಿಚಿತರಾಗಿರಬೇಕು. ಮನೆ ಎಂಬುದು ಒಂದು ಅಪ್ಯಾಯಮಾನವಾದ, ಅಕ್ಕರೆಯ, ನೆಮ್ಮದಿಯ ವಾಸಸ್ಥಳವಾಗಿರಬೇಕು, ಮನೆಯ ಪ್ರೀತಿಪೂರ್ವಕ ವಾತಾವರಣ ಆಯಸ್ಕಾಂತದಂತೆ ಮಕ್ಕಳನ್ನು ಸೆಳೆಯಬೇಕು.

ಪ್ರಸ್ತುತ ದಿನಮಾನಗಳಲ್ಲಿ ಕುಟುಂಬದ ನಿರ್ವಹಣೆ ಮಾಡಲು

ದಂಪತಿಗಳಿಬ್ಬರು ದುಡಿಯಬೇಕಾದ ಅನಿವಾರ್ಯತೆ ಇದೆ ಎಂಬುದು ನಿಜ. ಆದರೆ ಇದನ್ನು ಮಗುವಿಗೆ ಮನದಟ್ಟು ಮಾಡಿಕೊಡಬೇಕಾದ ಕರ್ತವ್ಯ ಪಾಲಕರದ್ದೇ, ಮಕ್ಕಳಿಗೆ ಅವರವರ ವಯಸ್ಸಿಗೆ ಅನುಗುಣವಾಗಿ ಅರ್ಥವಾಗುವಂತೆ ವಸ್ತು ವಿಷಯಗಳ ಗಂಭೀರತೆಯನ್ನು ತಿಳಿಸಿ ಹೇಳುವುದು ಪಾಲಕರ ಜವಾಬ್ದಾರಿ ಆಗಿರುತ್ತದೆ.

ಮನೆಯಲ್ಲಿ ಅಪ್ಪ ಅಮ್ಮ ಇದ್ದಾಗಲೂ ಕೂಡ ಮಕ್ಕಳು ಮೊಬೈಲನ್ನು ಹಿಡಿದು ಕುಳಿತುಕೊಳ್ಳುತ್ತಾರೆ ಎಂದರೆ ಅದರರ್ಥ ತನ್ನ ಅಪ್ಪ ಅಮ್ಮನಲ್ಲಿ ದೊರೆಯದ ಯಾವುದೋ ಒಂದು ಮನಸ್ಸಿಗೆ ಹಿಡಿಸುವ ವಿಷಯ ಮೊಬೈಲ್ ನಲ್ಲಿ ಮಕ್ಕಳಿಗೆ ದೊರೆಯುತ್ತದೆ ಎಂದಲ್ಲವೇ?. ಮಕ್ಕಳ ಪಾಲಿಗೆ ತಂದೆ ತಾಯಿಗಳು ಚುಂಬಕ ಶಕ್ತಿಯಂತೆ ಆಕರ್ಷಣೆಯನ್ನು ಹೊಂದಿರಬೇಕು. ತಮ್ಮೆಲ್ಲ ಬೇಕು ಬೇಡಗಳನ್ನು, ನೋವು ನಲಿವುಗಳನ್ನು ಮಕ್ಕಳು ನಿಸ್ಸಂಕೋಚವಾಗಿ ಪಾಲಕರ ಮುಂದೆ ಹೇಳಿಕೊಳ್ಳುವಂತಹ ವಾತಾವರಣವನ್ನು ಪಾಲಕರು ಮನೆಯಲ್ಲಿ ಸೃಷ್ಟಿಸಬೇಕು.

ಮಕ್ಕಳಿಗೆ ಬಾಲ್ಯದಿಂದಲೇ ಒಳ್ಳೆಯ ನಡವಳಿಕೆಯನ್ನು, ಮನೆಯ ಪರಿಪಾಠಗಳನ್ನು ಕಡ್ಡಾಯವಾಗಿ ಹಾಕಿಕೊಟ್ಟರೆ ಮುಂದೆ ಮಕ್ಕಳು ಅದೆಷ್ಟೇ



ಬೆಳೆದು ದೊಡ್ಡವರಾದರು ಕೂಡ ಅವುಗಳನ್ನು ಪರಿಪಾಲಿಸುತ್ತಾರೆ. ಚಿಕ್ಕವರಿದ್ದಾಗ 'ಅವರಿಗೆ ಏನು ತಿಳಿಯುತ್ತದೆ ಹೋಗಲಿ ಬಿಡು' ಎಂದು ಭಾವಿಸಿ ಮಕ್ಕಳಿಗೆ ಏನೂ ಹೇಳದೆ ಹೋದರೆ "ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೇ?" ಎಂಬಂತೆ ಮಕ್ಕಳು ಪಾಲಕರ ಮಾತನ್ನು ಅನುಸರಿಸುವುದಿಲ್ಲ.

ಭಾರತ ದೇಶ ಎಂಬುದು ಕೇವಲ ಒಂದು ದೇಶ ಮಾತ್ರವಲ್ಲ ಅದೊಂದು ಸನಾತನ ಸಂಸ್ಕೃತಿ. ಆಧ್ಯಾತ್ಮಿಕ ಔನ್ನತ್ಯವನ್ನು ಹೊಂದಿರುವ ಭಾರತ ದೇಶ ಅದೆಷ್ಟೇ ವಿದೇಶಿ ಸಂಸ್ಕೃತಿಯ ಹೊರವೇಷವನ್ನು ಧರಿಸಿದ್ದರೂ ಮೂಲದಲ್ಲಿ ಭಾರತೀಯತೆಯ ಆತ್ಮಿಕ ಭಾವವನ್ನು ಹೊಂದಿದೆ. ಧರಿಸಿರುವುದು ವೇಷ ಎಂದಾದರೆ ಯಾವತ್ತಾದರೂ ಕಳಚಲೇಬೇಕಲ್ಲವೇ?

ನಮ್ಮ ಮಕ್ಕಳು ನಮ್ಮದೇ ನೆಲದ ಜೀವ, ಭಾವಗಳನ್ನು ಹೊಂದಿರುವಂತೆ ಬೆಳೆಸುವುದು ಪಾಲಕರ ಕರ್ತವ್ಯವಷ್ಟೇ ಅಲ್ಲ ಜವಾಬ್ದಾರಿ ಕೂಡ ಎಂಬ ಅರಿವು ಸದಾ ಪಾಲಕರಲ್ಲಿರಬೇಕು.

ಲೇಖನ
– ವೀಣಾ ಹೇಮಂತಗೌಡ ಪಾಟೀಲ್
ಮುಂಡರಗಿ ಗದಗ ಜಿಲ್ಲೆ



# ಗೂಂಡಾ ಕಾಯ್ದೆಯಡಿ ಕುಖ್ಯಾತ ರೌಡಿ ಬಂಧನಕ್ಕೆ ಜಿಲ್ಲಾಧಿಕಾರಿ ಆದೇಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಸಾರ್ವಜನಿಕ ಶಾಂತಿ, ಸುವ್ಯವಸ್ಥೆ ಹಾಗೂ ಕಾನೂನು ಸುವ್ಯವಸ್ಥೆಗೆ ಭಂಗ ಉಂಟುಮಾಡುವ ಚಟುವಟಿಕೆಗಳಲ್ಲಿ ತೊಡಗಿದ್ದಾನೆ ಎಂಬ ಆರೋಪದ ಮೇರೆಗೆ ವಿಜಯಪುರ ನಗರದ ಗಣೇಶನಗರ ನಿವಾಸಿ, ಮೂಲತಃ ಇಂಡಿ ತಾಲೂಕಿನ ಅರ್ಜನಾಳ ಗ್ರಾಮದ ತುಳಸಿರಾಮ್ ತಂದೆ ಪಂಡಿತ ಹರಿಜನ @ ಬನಸೋಡೆ (27) ವಿರುದ್ಧ ಗೂಂಡಾ ಕಾಯ್ದೆಯಡಿ ಬಂಧನ ಆದೇಶ ಹೊರಡಿಸಲಾಗಿದೆ.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ. ಆನಂದ್ ಕೆ. ಅವರು ಕರ್ನಾಟಕ ಅಕ್ರಮ ಕಳ್ಳಭಟ್ಟಿ ಸರಾಯಿ ವ್ಯವಹಾರ, ಮಾದಕ ದ್ರವ್ಯ ಅಪರಾಧಿಗಳು, ಜೂಜುಕೋರರು, ಗುಂಡಾಗಳು, ಅನೈತಿಕ ಮಾನವ ಕಳ್ಳಸಾಗಣೆ ಹಾಗೂ ಇತರೆ ಅಪಾಯಕಾರಿ ಚಟುವಟಿಕೆಗಳ ತಡೆ ಅಧಿನಿಯಮ 1985 (ಗೂಂಡಾ ಕಾಯ್ದೆ) ರ ಕಲಂ 3(1) ಮತ್ತು 3(2) ಅಡಿಯಲ್ಲಿ ಈ ಆದೇಶ ಹೊರಡಿಸಿದ್ದಾರೆ.

ಆದೇಶದಲ್ಲಿ ತುಳಸಿರಾಮ್ ಬನಸೋಡೆ ವೃತ್ತಿಪರ ಅಪರಾಧಿಯಾಗಿದ್ದು, ಭಾರತೀಯ ದಂಡ ಸಂಹಿತೆ ಹಾಗೂ ಭಾರತೀಯ ನ್ಯಾಯ ಸಂಹಿತೆಯ ವಿವಿಧ ಅಧ್ಯಾಯಗಳಿಗೆ ಸಂಬಂಧಿಸಿದ ಅಪರಾಧಗಳಲ್ಲಿ ತೊಡಗಿರುವ ಪ್ರವೃತ್ತಿ ಹೊಂದಿದ್ದಾನೆ ಎಂದು ಉಲ್ಲೇಖಿಸಲಾಗಿದೆ. ಸಮಾಜದ ಶಾಂತಿ ಮತ್ತು ಸಾರ್ವಜನಿಕ ಸುರಕ್ಷತೆಗೆ ಧಕ್ಕೆಯಾಗುವ ಸಾಧ್ಯತೆ ಇರುವುದರಿಂದ ಅವನನ್ನು ತಡೆಬಂಧನದಲ್ಲಿ ಇರಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ತುಳಸಿರಾಮ್ ಬನಸೋಡೆ ಅವರನ್ನು ಚಾಮರಾಜನಗರ ಜಿಲ್ಲಾ ಕಾರಾಗೃಹದಲ್ಲಿ ತಡೆಬಂಧನದಲ್ಲಿ ಇರಿಸಲು ಆದೇಶಿಸಲಾಗಿದ್ದು, ಬಂಧನಕ್ಕೆ ಸಂಬಂಧಿಸಿದ ಮೂಲ ಆಧಾರಗಳು ಹಾಗೂ ಕಾರಣಗಳನ್ನು ಆದೇಶದೊಂದಿಗೆ ಲಗತ್ತಿಸಲಾಗಿದೆ.

ಈ ಆದೇಶವನ್ನು ಜುಲೈ 10, 2026ರಂದು ಹೊರಡಿಸಲಾಗಿದ್ದು, ಜಾರಿಗೆ ತರಲು ಗೋಳಗುಮ್ಮಟ ಪೊಲೀಸ್ ವೃತ್ತ ನಿರೀಕ್ಷಕರಿಗೆ ನಿರ್ದೇಶನ ನೀಡಲಾಗಿದೆ. ಬಂಧನದ ಆದೇಶವನ್ನು ಜಾರಿಗೊಳಿಸಿದ ದಿನಾಂಕ ಹಾಗೂ ಸಮಯದ ವಿವರಗಳೊಂದಿಗೆ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ.

# ರೈತರ ಸಾಲ ಸಂಪೂರ್ಣ ಮನ್ನಾ ಮಾಡಲು ಹಸಿರು ಸೇನೆ ಆಗ್ರಹ


■ ಉದಯರಶ್ಮಿ ದಿನಪತ್ರಿಕೆ



ಕೆಂಭಾವಿ: ರಾಜ್ಯದಲ್ಲಿ ತೀವ್ರ ಮಳೆ ಕೊರತೆಯಿಂದಾಗಿ ಕೃಷಿ ಬಿಕ್ಕಟ್ಟು ಎದುರಾಗಿದ್ದು, ತಕ್ಷಣವೇ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು ಹಾಗೂ ರೈತರ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖರ ಬಣ) ವತಿಯಿಂದ ರಾಜ್ಯ ಕಾರ್ಯದರ್ಶಿ ಎಚ್. ಆರ್. ಬಡಿಗೇರ ಅವರ ನೇತೃತ್ವದಲ್ಲಿ ಯಾದಗಿರಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಪ್ರಸ್ತುತ 2026–27ನೇ ಸಾಲಿನಲ್ಲಿ ಕನಿಷ್ಠ ಮಳೆಯ ಮುನ್ಸೂಚನೆ ಇರುವುದರಿಂದ ಮತ್ತು ತೀವ್ರ ಕೃಷಿ ಬಿಕ್ಕಟ್ಟು ತಲೆದೋರಿರುವುದರಿಂದ ರಾಜ್ಯವನ್ನು 'ಬರಪೀಡಿತ ಪ್ರದೇಶ' ಎಂದು ಸರ್ಕಾರ ಅಧಿಕೃತವಾಗಿ ಘೋಷಿಸಬೇಕು ಎಂದು ಒತ್ತಾಯಿಸಲಾಯಿತು. ವಿಶೇಷವಾಗಿ ಉತ್ತರ ಕರ್ನಾಟಕದ ಭಾಗಗಳಲ್ಲಿ ಸಕಾಲಕ್ಕೆ ಮಳೆ ಬಾರದ ಕಾರಣ ರೈತರು ಬೆಳೆದ ಬೆಳೆಗಳು ಕಣ್ಣೆದುರೇ ಒಣಗಿಹೋಗಿವೆ. ಇತ್ತ ಜಾನುವಾರುಗಳಿಗೆ ಮೇವು ಮತ್ತು ನೀರಿನ ತೀವ್ರ ಅಭಾವ ಸೃಷ್ಟಿಯಾಗಿದೆ. ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಆದ್ದರಿಂದ ರೈತರ ಹಿತದೃಷ್ಟಿಯಿಂದ ಅವರ ಎಲ್ಲಾ ಕೃಷಿ ಸಾಲಗಳನ್ನು ಸರ್ಕಾರ ಸಂಪೂರ್ಣವಾಗಿ ಮನ್ನಾ ಮಾಡಬೇಕು. ಜಾನುವಾರುಗಳ ರಕ್ಷಣೆಗಾಗಿ ತಕ್ಷಣವೇ ಮೇವು ಬ್ಯಾಂಕ್‌ಗಳನ್ನು ತೆರೆಯಬೇಕು ಹಾಗೂ ಅಗತ್ಯವಿರುವ ಕಡೆಗಳಲ್ಲಿ ತಕ್ಷಣವೇ ಗೋಶಾಲೆಗಳನ್ನು ಆರಂಭಿಸಬೇಕು ಎಂದು ಪತ್ರದಲ್ಲಿ ಆಗ್ರಹಿಸಲಾಗಿದೆ.

ಈ ಸಂದರ್ಭದಲ್ಲಿ ಯಾದಗಿರಿ ತಾಲೂಕು ಅಧ್ಯಕ್ಷ ಮಂಜುಗೌಡ ತಂಗಡಗಿ, ಶಹಾಪೂರ ತಾಲೂಕು ಅಧ್ಯಕ್ಷ ಭೀಮನಗೌಡ ಹುಲಕಲ್, ಕಾರ್ಯದರ್ಶಿ ಮಾಳಪ್ಪ ಭೋಸ್ಲಿ, ವಡಿಗೇರಿ ತಾಲೂಕು ಅಧ್ಯಕ್ಷ ಮಹೇಶ ಎಚ್. ಕ್ಯಾತನಾಳ, ಕೆಂಭಾವಿ ಹೋಬಳಿ ಉಪಾಧ್ಯಕ್ಷ ಸಂಗು ಪತೇಪೂರ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.



# ಕನ್ನಡಪ್ರಭ ಸಂಪಾದಕ ಜೋಗಿಗೆ ಕೆಯುಡಬ್ಲ್ಯೂಜೆ ಅಭಿನಂದನೆ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ಕನ್ನಡಪ್ರಭ ದಿನಪತ್ರಿಕೆಯ ಸಂಪಾದಕರಾಗಿ ನೇಮಕಗೊಂಡಿರುವ ಗಿರೀಶ್ ರಾವ್ ಹತ್ವಾರ್ (ಜೋಗಿ) ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ವತಿಯಿಂದ ಅಭಿನಂದನೆ ಸಲ್ಲಿಸಲಾಯಿತು.

ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಜೋಗಿ ಅವರಿಗೆ ಶಾಲು ಹೊದಿಸಿ ಸನ್ಮಾನಿಸಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಕನ್ನಡಪ್ರಭ ಪ್ರಧಾನ ಸಂಪಾದಕರಾದ ರವಿ ಹೆಗಡೆ, ಇಂಡಿಯನ್ ಫೆಡರೇಷನ್ ಆಫ್ ವರ್ಕಿಂಗ್ ಜರ್ನಲಿಸ್ಟ್ ಅಧ್ಯಕ್ಷ ಬಿ.ವಿ. ಮಲ್ಲಿಕಾರ್ಜುನಯ್ಯ, ಕೆಯುಡಬ್ಲ್ಯೂಜೆ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ್, ಖಜಾಂಚಿ ವಾಸುದೇವ ಹೊಳ್ಳ ಹಾಗೂ ರಾಯಚೂರಿನ ಸಿದ್ದು ಬಿರಾದಾರ ಉಪಸ್ಥಿತರಿದ್ದರು.

ಕ್ರಿಯಾಶೀಲ ಪತ್ರಕರ್ತರಾದ ಜೋಗಿ ಅವರ ಸಂಪಾದಕೀಯ ಪಯಣ ಇನ್ನಷ್ಟು ಯಶಸ್ವಿಯಾಗಲಿ ಎಂದು ಕೆಯುಡಬ್ಲ್ಯೂಜೆ ಪದಾಧಿಕಾರಿಗಳು ಶುಭ ಹಾರೈಸಿದರು.

# ನಾಗಠಾಣ ಉಪಕಾಲುವೆಗೆ ನೀರು ಹರಿಸಲು ರೈತರ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಆಲಮಟ್ಟಿ ಆಣೆಕಟ್ಟಿನಲ್ಲಿ ಸಾಕಷ್ಟು ನೀರು ಸಂಗ್ರಹವಾಗುತ್ತಿದ್ದು, ತಕ್ಷಣವೇ ಚಿಮ್ಮಲಗಿ ಮುಖ್ಯ ಕಾಲುವೆಯ ನಾಗಠಾಣ ಉಪಕಾಲುವೆಗೆ ನೀರು ಹರಿಸಬೇಕೆಂದು ನಿವಾಳಖೇಡ, ಹರನಾಳ, ಮುಳಸಾವಳಗಿ ಗ್ರಾಮದ ರೈತರು ಆಗ್ರಹಿಸಿದ್ದಾರೆ.

ತಾಲ್ಲೂಕು ಸೇರಿದಂತೆ ಮತಕ್ಷೇತ್ರದಲ್ಲಿ ವಾಡಿಕೆಯಂತೆ ಮುಂಗಾರಿನ ಬಹುತೇಕ ಮಳೆಗಳು ರೈತ ಸಮುದಾಯದ ನಿರೀಕ್ಷೆಯಂತೆ ಆಗದೇ ಇದ್ದು ಬರಗಾಲ ಛಾಯೆ ಆವರಿಸಿದೆ. ಆದರೆ ಸಮಾಧಾನ ತರುವ ವಿಷಯವೇಂದರೆ ಮಹಾರಾಷ್ಟ್ರ ಸೇರಿದಂತೆ ಕೃಷ್ಣಾ ನದಿ ತೀರದ ಪ್ರದೇಶಗಳಲ್ಲಿ ಉತ್ತಮ ಮಳೆಯಾಗುತ್ತಿದ್ದು, ಆಲಮಟ್ಟಿ ಆಣೆಕಟ್ಟಿನಲ್ಲಿ ಹೆಚ್ಚಿನ ನೀರು ಸಂಗ್ರಹವಾಗುತ್ತಿದೆ. ಜಿಲ್ಲೆಯ ಬಹುತೇಕ ಕಾಲುವೆಗಳಿಗೆ ನೀರು ಪೂರೈಸುವ ಆಲಮಟ್ಟಿ ಆಣೆಕಟ್ಟಿನಲ್ಲಿ ದಿನದಿಂದ ದಿನಕ್ಕೆ ನೀರು ಹರಿದು ಬರುತ್ತಿರುವುದು ರೈತ ಸಮುದಾಯಕ್ಕೆ ನೆಮ್ಮದಿ ನೀಡುವಂತಿದೆ. ಈ ನೀರನ್ನು ಕಾಲುವೆಗಳಿಗೆ ಹರಿಸಲು ಯಾವುದೇ ತೊಂದರೆಯಿಲ್ಲ. ಅದಕ್ಕಾಗಿ ತಕ್ಷಣವೇ ಕಾಲುವೆಗಳ ಮುಖಾಂತರ ನಿರಂತರ ನೀರು ಹರಿಸಿ ರೈತ ಸಮುದಾಯಕ್ಕೆ ಅನುಕೂಲ ಮಾಡಿಕೊಡಬೇಕು.

ದೇವರಹಿಪ್ಪರಗಿ ಭಾಗದ ಚಿಮ್ಮಲಗಿ ಮುಖ್ಯ ಕಾಲುವೆ ಹಾಗೂ ನಾಗಠಾಣ ಉಪಕಾಲುವೆಗಳಿಗೆ ಕಾಲುವೆಯ ಕೊನೆಯ ಭಾಗದವರೆಗೂ ತಲುಪುವಂತೆ ಕೂಡಲೇ ನೀರು ಹರಿಸಲು ಕೆಬಿಜೆಎನ್ಎಲ್ ಅಧಿಕಾರಿಗಳು ಕ್ರಮ ವಹಿಸಬೇಕು ಇದರಿಂದ ಕೆರೆಗಳು ಸಹ ಸ್ವಲ್ಪವಾದರೂ ನೀರು ಕಾಣುವಂತಾಗುತ್ತದೆ ಎಂದು ರೈತಸಂಘದ ಪದಾಧಿಕಾರಿಗಳಾದ ಚನ್ನಪ್ಪ ಕಾರಜೋಳ, ಚಂದ್ರಕಾಂತ ದಳವಾಯಿ, ಸುನೀಲ ಭಂಟನೂರ, ಹಣಮಂತ ನಂದ್ಯಾಳ, ವಿಠ್ಠಲ ಭಂಟನೂರ, ಶ್ರೀಮಂತ ತಳವಾರ, ಶಿವನಗೌಡ ಪಾಟೀಲ, ಶಿವಪ್ಪ ತಳವಾರ, ಅನೀಲ ಭಂಟನೂರ, ಮಲಕಪ್ಪ ನಾಯ್ಕೋಡಿ, ರಾವುತಪ್ಪ ದಳವಾಯಿ(ನಿವಾಳಖೇಡ) ಬಸವರಾಜ ಕಲ್ಲೂರ, ಬಸನಗೌಡ ಭೈರೋಡಗಿ (ಮುಳಸಾವಳಗಿ), ಶಂಕರಗೌಡ ಕೋಟಿಖಾನಿ, ಸದಾಶಿವ ತುಂಬಗಿ(ಹರನಾಳ) ಸೇರಿದಂತೆ ರೈತರು ಆಗ್ರಹಿಸಿದ್ದಾರೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR